ಸಂಪುಟ : 9 ಸಂಚಿಕೆ 305 ಪುಟ : 4+2 ಬೆಲೆ: 3.00 ಶನಿವಾರ ಜನವರಿ 18 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 305 Pages : 4+2 Price : 3.00 Saturday January 18 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ರಾಷ್ಟ್ರೀಯ ಲೋಕ ಅದಾಲತ್ ಮಾರ್ಚ್ 8ಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ 8–03–2025ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ.

ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಬಸವರಾಜ ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್.ಎಮ್.ಆರ್.ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು 08–03–2025ರಂದು ಜರಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ವಿದ್ಯುತ್ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳಿನ 3ನೇ ಶನಿವಾರ ಉಪವಿಭಾಗ ಮಟ್ಟದಲ್ಲಿ ವಿದ್ಯುತ್ ಅದಾಲತ್ ನಡೆಸುವ ಮೂಲಕ ಸ್ಥಳದಲ್ಲಿಯೇ ಗ್ರಾಹಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಕ್ರಮ ವಹಿಸಲು ಸರ್ಕಾರವು ಆದೇಶಿಸಿದೆ. ಇದರ ಪ್ರಯುಕ್ತ ಜ.18ರಂದು ಮಧ್ಯಾಹ್ನ 3 ಗಂಟೆಗೆ ವಿದ್ಯುತ್ ಅದಾಲತ್ ನಡೆಸಲಾಗುವುದು. ಆದ್ದರಿಂದ ಸಾರ್ವಜನಿಕರು ಈ ಪ್ರಕಟನೆಯನ್ನು ಗಮನಿಸಿ ತಮ್ಮ ವಿದ್ಯುತ್ ಸಮಸ್ಯೆಗಳಿಗೆ, ತಮ್ಮ ವ್ಯಾಪ್ತಿಯ ವಿದ್ಯುತ ಉಪವಿಭಾಗ ಕಛೇರಿಗೆ ಭೇಟಿ ನೀಡಿ ಪರಿಹಾರ ಕಂಡುಕೊಳ್ಳಲು ಪ್ರಕಟಣೆಯಲ್ಲಿ ಕೋರಲಾಗಿದೆ.

ಶೈಕ್ಷಣಿಕ ಕಾರ್ಯಾಗಾರ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ

ಶಿಕ್ಷಕ ಸಮೂಹದಿಂದಲೇ ದೇಶದ ಭವಿಷ್ಯ ನಿರ್ಮಾಣ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ಸಾಮಾಜಿಕ ವ್ಯವಸ್ಥೆಯಲ್ಲಿ ಶಿಕ್ಷಣ ವೃತ್ತಿಯು ಪವಿತ್ರ ಮತ್ತು ಶ್ರೇಷ್ಠವಾಗಿದೆ. ಶಿಕ್ಷಕ ಸಮೂಹದಿಂದಲೇ ದೇಶದ ಭವಿಷ್ಯ ನಿರ್ಮಾಣವಾಗಲಿದೆ. ಶಿಕ್ಷಕರು ಸೃಜನಾತ್ಮಕ ಕೌಶಲ್ಯಗಳನ್ನು ಬಳಸುವ ಮೂಲಕ ವಿದ್ಯಾರ್ಥಿಗಳ ಬೌದ್ಧಿಕ ಮಟ್ಟದ ಮೇಲೆ ಪರಿಣಾಮ ಬೀರಿ ಕಲಿಕೆಯನ್ನು ಪರಿಣಾಮಕಾರಿಗೊಳಿಸಿ ಶೈಕ್ಷಣಿಕ ಗುರಿ ಉದ್ದೇಶಗಳನ್ನು ಈಡೇರಿಸುವುದರೊಂದಿಗೆ ಸಾಕ್ಷರ ಸಮುದಾಯ ನಿರ್ಮಿಸುವ ಗುರುತರ ಜವಾಬ್ದಾರಿ ಇಂದಿನ ಶಿಕ್ಷಕ ಸಮುದಾಯದ ಮೇಲಿದೆ ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ನುಡಿದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಗದಗ ಶಹರ ಘಟಕದ ವತಿಯಿಂದ ಅಕ್ಷರದ ಅವ್ವ ಸಾವಿತ್ರಿಬಾಯಿ ಫುಲೆ ಹಾಗೂ ಶಿಕ್ಷಕಿ ಫಾತಿಮಾ ಶೇಖರವರ ಜಯಂತ್ಯುತ್ಸವದ ಅಂಗವಾಗಿ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಏರ್ಪಡಿಸಲಾಗಿದ್ದ ಶೈಕ್ಷಣಿಕ ಕಾರ್ಯಾಗಾರ ಹಾಗೂ ಆದರ್ಶ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು

ಮಾತನಾಡಿದರು.

ಪ್ರಾಚೀನ ಕಾಲದಲ್ಲಿ ಸ್ತ್ರೀಯು ಸ್ವಾತಂತ್ರ್ಯಕ್ಕೆ ಅರ್ಹಳಲ್ಲ, ಆಕೆ ಬಾಲ್ಯದಲ್ಲಿ ತಂದೆ–ತಾಯಿಯ ಆಶ್ರಯದಲ್ಲಿ, ಯೌವನದಲ್ಲಿ ಗಂಡನ ಆಶ್ರಯದಲ್ಲಿ, ಮುಪ್ಪಿನಲ್ಲಿ ಮಕ್ಕಳ ಆಸರೆಯಲ್ಲಿ ಜೀವನ ಕಳೆಯುವ ಪರಿಪಾಠ ಇತ್ತು. ನಂತರದ ಕಾಲಘಟ್ಟದಲ್ಲಿ ಜ್ಞಾನದ ಸಾವಿತ್ರಿಬಾಯಿ ಫುಲೆ ಅವರು ಶೈಕ್ಷಣಿಕ ವ್ಯಾಸಂಗ ಪೂರೈಸಿ ಮಕ್ಕಳ ಜ್ಞಾನದ ಹಸಿವು ನೀಗಿಸಿ ಪ್ರಥಮ ಮಹಿಳಾ ಶಿಕ್ಷಕಿ ಎಂಬ ಖ್ಯಾತಿಯನ್ನು ಗಳಿಸಿದರು. ನಾನು ಸಹ ಅಪರ ಜಿಲ್ಲಾಧಿಕಾರಿಯಾಗುವ ಮುನ್ನ ಪ್ರಾಥಮಿಕ ಶಾಲಾ ಶಿಕ್ಷಕಿಯಾಗಿ ಬೋಧನೆಯನ್ನು ಮಾಡಿದ್ದೇನೆ. ಪ್ರಸ್ತುತ ಸಮಾಜದಲ್ಲಿ ಶಿಕ್ಷಕ ಹುದ್ದೆಗಿಂತ ಉನ್ನತ ಹುದ್ದೆ ಮತ್ತೊಂದಿಲ್ಲ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಗದಗ ಶಹರದ ಅಧ್ಯಕ್ಷ ಎಸ್.ಕೆ. ಮಂಗಳಗುಡ್ಡ ವಹಿಸಿದ್ದರು. ಕಾರ್ಯಕ್ರಮದಲ್ಲಿ ಆದರ್ಶ ಶಿಕ್ಷಕರನ್ನು ಹಾಗೂ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಯುವ ಮುಖಂಡ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿದೆ. ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು. ಆದ್ದರಿಂದ ಶಿಕ್ಷಣದಲ್ಲಿ ಕ್ರಾಂತಿ ಮಾಡಿದ ಸಾವಿತ್ರಿಬಾಯಿ ಫುಲೆ ಮತ್ತು ಫಾತಿಮಾ ಶೇಖ್‌ರವರ ಬಗ್ಗೆ ಮಕ್ಕಳಲ್ಲಿ ತಿಳುವಳಿಕೆ ನೀಡುವುದು ಅವಶ್ಯವಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಚಂದ್ರಶೇಖರ ನುಗ್ಲಿ, ಎಸ್.ಎನ್. ಬಳ್ಳಾರಿ, ಆರ್.ಎಸ್. ಬುರಡಿ, ವಿ.ಎಂ. ಹಿರೇಮಠ, ಮಂಗಳಾ ತಾಪಸ್ಕರ, ವಿ.ವಿ. ನಡುವಿನಮನಿ, ಎಸ್.ಡಿ. ಕನವಳ್ಳಿ, ಕೆ.ಎ. ಬಳಿಗೇರ, ಅತಿಥಿಗಳಾಗಿ ರವಿ ಗುಂಜೀಕರ, ಬಸವರಾಜ ಬಳ್ಳಾರಿ, ಡಿ.ಎಸ್. ತಳವಾರ, ಮಹೇಶ ಕುರಿ, ಎಸ್.ಪಿ. ಪ್ರಭಯ್ಯನಮಠ, ಶಂಕರ ಹಡಗಲಿ, ಸುರೇಶ ಕೊಪ್ಪದ, ಕೆ.ಬಿ. ಕೊಣ್ಣೂರ, ಎಫ್.ಜೆ. ದಲಬಂಜನ, ಮುತ್ತಪ್ಪ ಮಲಕಶೆಟ್ಟಿ, ಶರಣಪ್ಪ ನಾಗರಳ್ಳಿ, ರವಿ ಕೋಟಿಯವರ, ಶಿವಯೋಗಿ ಬಂಡಿ ಪಾಲ್ಗೊಂಡಿದ್ದರು.

ರಾಹುಲ್ ಗಾಂಧಿ ಹೇಳಿಕೆಯನ್ನು ವಿರೋಧಿಸಿ ಬಿಜೆಪಿ ಯುವ ಮೋರ್ಚಾದಿಂದ ಪ್ರತಿಭಟನೆ

ಬಿಜೆಪಿ ದೇಶದ ಪರವಾಗಿ ಕೆಲಸ ಮಾಡುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶ ವಿರೋಧಿ ಹೇಳಿಕೆ ನೀಡಿರುವ ಕಾಂಗ್ರೆಸ್ ಪಕ್ಷದ ನಾಯಕ ಹಾಗೂ ಲೋಕಸಭಾ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿಯವರು ಭಾರತ ದೇಶದ ವಿರುದ್ಧವೇ ಹೋರಾಟ ಮಾಡುವೆವು ಎಂಬ ದೇಶ ವಿರೋಧಿ ಹೇಳಿಕೆ ನೀಡಿದ್ದು ಹಾಗೂ ಭಾರತ ದೇಶದ ಸಂವಿಧಾನದ ಮೂಲಕ ರಚನೆಯಾದ ಎಲ್ಲಾ ಅಂಗಗಳನ್ನು ದೋಷಿಸುತ್ತಿದ್ದಾರೆ ಎಂದು ಆರೋಪಿಸಿ ಬಿಜೆಪಿ ಯುವ ಮೋರ್ಚಾ ಗದಗ ನಗರ ಮಂಡಲದ ವತಿಯಿಂದ ನಗರದ ಗಾಂಧಿ ವೃತ್ತದ ಬಳಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯ ನೇತೃತ್ವವನ್ನು ಬಿಜೆಪಿ ನಗರ ಯುವ ಮೋರ್ಚಾ ಅಧ್ಯಕ್ಷ ನವೀನ್ ಕೋಟೆಕಲ್ ವಹಿಸಿಕೊಂಡಿದ್ದರು. ಪಕ್ಷದ ಹಿರಿಯರಾದ ಎಂ.ಎಸ್. ಕರಿಗೌಡ್ರ ಮಾತನಾಡಿ, ದೇಶದ ವಿರುದ್ಧ ಇಂತಹ ಹೇಳಿಕೆ ನೀಡಿರುವುದನ್ನು ತೀವ್ರವಾಗಿ ಖಂಡಿಸುತ್ತೇವೆ.

ಆರ್‌ಎಸ್‌ಎಸ್, ಬಿಜೆಪಿ ದೇಶದ ಪರವಾಗಿ ಕೆಲಸ ಮಾಡುತ್ತಿದೆ ಎಂದರು.

ನಗರ ಮಂಡಲ ಅಧ್ಯಕ್ಷರು ಮಾತನಾಡಿ, ದೇಶ ವಿರೋಧಿ ಮತ್ತು ಭಾರತ ದೇಶದ ಸಂವಿಧಾನದ ಮೂಲಕ ರಚನೆಯಾದ ಎಲ್ಲಾ ಅಂಗಗಳನ್ನು ದೋಷಿಸುತ್ತಿದ್ದು, ಈ ಮೂಲಕ ಭಾರತ ದೇಶದ ಪ್ರತಿಯೊಬ್ಬ ನಾಗರಿಕನನ್ನೂ ಅವಮಾನಿಸಿದಂತೆ ಎಂದರು.

ಈ ಸಂದರ್ಭದಲ್ಲಿ ಹಿರಿಯರಾದ ಎಂ.ಎಂ. ಹಿರೇಮಠ, ರಾಜ್ಯ ಅಲ್ಪಸಂಖ್ಯಾತ ಮೋರ್ಚಾ ಕಾರ್ಯದರ್ಶಿ ಇರ್ಷಾದ ಮಾನ್ವಿ, ರಾಜ್ಯ ಹಿಂದುಳಿದ ವರ್ಗ ಮೋರ್ಚಾ ಕಾರ್ಯದರ್ಶಿ ಸುಧೀರ್ ಕಾಟಿಗರ, ನಗರಸಭೆ ಸದಸ್ಯರಾದ ವಿನಾಯಕ್ ಮಾನ್ವಿ, ನಾಗರಾಜ್ ತಳವಾರ್, ಮಾಧುಸಾ ಮೆರವಾಡೆ, ರಾಘವೇಂದ್ರ ಯಳವತ್ತಿ, ಮುತ್ತು ಮುಸಿಗೇರಿ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ಶಂಕರ ಕರಬಿಷ್ಟಿ, ಶಂಕರ್ ಮಲ್ಲಸಮುದ್ರ, ಯುವ ಮೋರ್ಚಾ ಪದಾಧಿಕಾರಿಗಳಾದ ಕಿರಣ್ ಕಲಾಲ, ಪ್ರವೀಣ್ ಹಡಪದ್, ರಾಜು ರೊಟ್ಟಿ, ಸಚಿನ್ ಮಡಿವಾಳರ, ಕೃಷ್ಣ ಚಿಂತಾ, ವಿನಾಯಕ್ ಕಟವಾ, ರಾಹುಲ್ ಸಂಕಣ್ಣವರ್, ಶ್ರೀಕಾಂತ್ ಆದ್ಯಪ್ಪನವರ್ ಮುಂತಾದವರು ಉಪಸ್ಥಿತರಿದ್ದರು. ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಬಸವರಾಜ್ ನೆರೆಗಲ್ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.

ಆರೋಗ್ಯ ಕೇಂದ್ರಕ್ಕೆ ಲೋಕಾಯುಕ್ತರ ಭೇಟಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಶುಕ್ರವಾರ ಲೋಕಾಯುಕ್ತ ಇನ್ಸ್‌ಪೆಕ್ಟರ್ ಪರಮೇಶ್ವರ ಕವಟಗಿ ಅವರ ನೇತೃತ್ವದ ಸಿಬ್ಬಂದಿಗಳ ತಂಡ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಸ್ವಚ್ಛತೆ, ಶುಚಿತ್ವ, ವೈದ್ಯರ ಕೊರತೆ, ಬಾಣಂತಿಯರಿಗೆ ಊಟದ ವ್ಯವಸ್ಥೆ, ಆಸ್ಪತ್ರೆ ಮತ್ತು ಶೌಚಾಲಯ ಸ್ವಚ್ಛತೆ, ಹಾಜರಾತಿ ಪುಸ್ತಕದ ನಿರ್ವಹಣೆ, ಮೇಲ್ವಿಚಾರಣೆ ಇಲ್ಲದಿರುವುದು, ಅವಧಿ ಮುಗಿದ ಕೆಲ ಔಷಧಿಗಳು, ಸಿಬ್ಬಂದಿಗಳು ತಾವೇ ಸ್ವಯಂ ಕೆಸಲದ ಹೊಂದಾಣಿಕೆ ಮಾಡಿಕೊಂಡು ಕಾರ್ಯನಿರ್ವಹಿಸುವುದು, ಎಕ್ಸರೇ ತೆಗೆಯುವ ಸಿಬ್ಬಂದಿ ರಸೀದಿ ಇಲ್ಲದೇ ದುಡ್ಡು ಪಡೆಯುವುದು, ಹೆಚ್‌ಐವಿ ಪರೀಕ್ಷೆ ಸಿಬ್ಬಂದಿ ಸರಿಯಾಗಿ ಬಾರದಿರುವುದು, ಸೆಕ್ಯೂರಿಟಿ, ಸಮರ್ಪಕ ಬೆಡ್ ಸೇರಿ ಅವ್ಯವಸ್ಥೆ ಮತ್ತು ಇಲ್ಲಗಳ ಸಮಸ್ಯೆಯನ್ನು ಸ್ವತಃ ಅರಿತರು.

ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸುವುದಿಲ್ಲ. ಔಷಧಿಯನ್ನು ಹೊರಗಡೆ ಬರೆದು–ಕೊಡುತ್ತಾರೆ. ಹೆರಿಗೆ ನಂತರ ಹಣ ಕೇಳುತ್ತಾರೆ. ತಾಯಿ ಕಾರ್ಡ್ ಇಲ್ಲ, ಬಾಣಂತಿಯರಿಗೆ ಊಟ ಸೇರಿ ಸರಿಯಾದ ವ್ಯವಸ್ಥೆ ಇಲ್ಲದಿರುವ ಬಗ್ಗೆ ರೋಗಿಗಳಿಂದ ಮಾಹಿತಿ ಪಡೆದು ಸಮಸ್ಯೆ ದಾಖಲಿಸಿಕೊಂಡರು. ಈ ವೇಳೆ ಹಾಜರಿದ್ದ ವೈದ್ಯರು ಮತ್ತು ಸಿಬ್ಬಂದಿಗೆ ಉಂಟಾಗಿರುವ ಅವ್ಯವಸ್ಥೆ ಸರಿಪಡಿಸಿಕೊಳ್ಳಬೇಕು ಮತ್ತು ಆಸ್ಪತ್ರೆಯಲ್ಲಿನ ಲಭ್ಯವಿರುವ ಎಲ್ಲ ಸೌಲಭ್ಯಗಳನ್ನು ರೋಗಿಗಳಿಗೆ ಕಲ್ಪಿಸಿ ಅವರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ಸೂಚಿಸಿದ ಅವರು, ಆಸ್ಪತ್ರೆಯಲ್ಲಿ ಕಂಡುಬಂದ ಅವ್ಯವಸ್ಥೆ, ಸಮಸ್ಯೆಗಳನ್ನು ಸಂಬಂಧಪಟ್ಟ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದರು.

ಮಾಜಿ ಸಿಎಂ ಯಡಿಯೂರಪ್ಪ ವಿರುದ್ಧದ ಪೋಕ್ಸೋ ಕೇಸ್: ಆದೇಶ ಕಾಯ್ದಿರಿಸಿದ ಹೈಕೋರ್ಟ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಜೆಪಿ ಹಿರಿಯ ನಾಯಕ ಹಾಗೂ ಮಾಜಿ ಸಿಎಂ ಯಡಿಯೂರಪ್ಪ ವಿರುದ್ಧದ ಪೋಕ್ಸೋ ಪ್ರಕರಣದ ವಿಚಾರಣೆ ಪೂರ್ಣಗೊಳಿಸಿರುವ ಹೈಕೋರ್ಟ್, ತನ್ನ ಆದೇಶವನ್ನು ಕಾಯ್ದಿರಿಸಿದೆ.

ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ನ್ಯಾಯಪೀಠ, ಆದೇಶ ಕಾಯ್ದಿರಿಸಿತು. ಇದೇ ವೇಳೆ ಯಡಿಯೂರಪ್ಪ ಖುದ್ದು ಹಾಜರಿಗೆ ನೀಡಿದ್ದ ವಿನಾಯಿತಿಯನ್ನು ವಿಸ್ತರಿಸಿದೆ.

ಪ್ರಾಸಿಕ್ಯೂಷನ್ ಪರ ಪ್ರೊ. ರವಿವರ್ಮಕುಮಾರ್ ವಾದಮಂಡನೆ ಮಾಡಿದ್ದು, ಬಿ.ಎಸ್.ಯಡಿಯೂರಪ್ಪ ಮನೆಯ ಎಂಟ್ರಿ ರಿಜಿಸ್ಟರ್ ತಿರುಚಲಾಗಿದೆ ಎಂದು ಹೇಳಿದ್ದಾರೆ. ಫಿರ್ಯಾದಿ, ಬಾಲಕಿ, ಶಿವಾನಂದ ತಗಡೂರು ಬಂದ ಸಮಯ ಬದಲಿಸಲಾಗಿದೆ. ಆರೋಪಿಗಳು ಫಿರ್ಯಾದಿ ಫೇಸ್ ಬುಕ್‌ನಿಂದ ವಿಡಿಯೋ ಡಿಲೀಟ್ ಮಾಡಿದ್ದಾರೆ. ಬಿಎಸ್ ಯಡಿಯೂರಪ್ಪ ಮನೆಗೆ ಕರೆತಂದು ವಿಡಿಯೋ ಡಿಲೀಟ್ ಮಾಡಿದ್ದಾರೆಂದು ವಾದಿಸಿದರು. ಮೊಬೈಲ್ ರೆಕಾರ್ಡಿಂಗ್‌ನಲ್ಲಿ ಯಡಿಯೂರಪ್ಪ ಧ್ವನಿಯಿದೆ ಎಂದ ಜಡ್ಜ್, ಆ ವಿಡಿಯೋ ರೆಕಾರ್ಡಿಂಗ್‌ನಲ್ಲಿರುವ ಹೇಳಿಕೆ ಡಿಸ್ಟರ್ಬಿಂಗ್ ಆಗಿವೆ. ಯಡಿಯೂರಪ್ಪ ಮನೆಗೆ ಫಿರ್ಯಾದಿ ಮಹಿಳೆ ಪದೇ ಪದೇ ಬಂದಿದ್ದಾರೆ. ಈ ಘಟನೆ ನಡೆದ ನಂತರ ಪದೇಪದೇ ಬರಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ.

ಫಿರ್ಯಾದಿ ಈ ಹಿಂದೆ 56 ದೂರು ನೀಡಿರುವ ಹಿನ್ನೆಲೆಯಲ್ಲಿ ಇದನ್ನು ಪರಿಗಣಿಸಬೇಕು. ಆರೋಪಪಟ್ಟಿಯಲ್ಲಿನ ಅಂಶಗಳೇ ಸಂಪೂರ್ಣ ಸತ್ಯವೆಂದು ಒಪ್ಪಬಾರದು ಎಂದು ಬಿ.ಎಸ್. ಯಡಿಯೂರಪ್ಪ ಪರ ಹಿರಿಯ ವಕೀಲ ಸಿ.ವಿ.ನಾಗೇಶ್ ವಾದಿಸಿದರು.

ಸಂಚಾರಿ ಪ್ರವಚನದಡಿಯಲ್ಲಿ ಸಿದ್ಧಾಂತ ಶಿಖಾಮಣಿಯ ಕುರಿತು ಮಲ್ಲಿಕಾರ್ಜುನ ಶ್ರೀಗಳ ನುಡಿ

ಜೀವನದ ಎಲ್ಲ ಅಂಶಗಳೂ ಸಿದ್ಧಾಂತ ಶಿಖಾಮಣಿಯಲ್ಲಿವೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮನುಷ್ಯ ಜೀವನದಲ್ಲಿ ಬಯಸುವುದು ಸುಖ, ಸಂತೋಷ, ನೆಮ್ಮದಿಯನ್ನು. ಇವು ದೊರಕಬೇಕಾದರೆ ಅವನಲ್ಲಿ ಕೆಲವಷ್ಟಾದರೂ ಉತ್ತಮ ಗುಣಗಳು, ಮೌಲ್ಯಗಳು ಇರಬೇಕು. ಅಂತಹ ಜೀವನ ಮೌಲ್ಯಗಳು ಮತ್ತು ಜೀವನಕ್ಕೆ ಬೇಕಾದ ಎಲ್ಲ ಅಂಶಗಳೂ ಶಿವಯೋಗಿ ಶಿವಾಚಾರ್ಯರು ರಚಿಸಿರುವ ಸಿದ್ಧಾಂತ ಶಿಖಾಮಣಿ ಗ್ರ

ಸಂಪಾದಕೀಯ

ಅಧಿಕಾರಕ್ಕಾಗಿ ಗ್ಯಾರಂಟಿ ನಕಲು ಮಾಡಿದ ಬಿಜೆಪಿ

ಅಧಿಕಾರಕ್ಕಾಗಿ ಭಾರತೀಯ ಜನತಾ ಪಾರ್ಟಿ ಏನೆಲ್ಲ ಮಾಡುತ್ತದೆ ಎನ್ನುವುದಕ್ಕೆ ದೆಹಲಿ ವಿಧಾನಸಭೆ ಚುನಾವಣೆ ಸಾಕ್ಷಿಯಾಗಿದೆ. ಕರ್ನಾಟಕದ ಕಾಂಗ್ರೆಸ್ ಜಾರಿಗೆ ತಂದಿರುವ ಗ್ಯಾರಂಟಿ ಕಾರ್ಯಕ್ರಮಗಳ ವಿರುದ್ಧ ದೇಶಾದ್ಯಂತ ವಿರೋಧ ವ್ಯಕ್ತಪಡಿಸಿದ ಬಿಜೆಪಿ, ಇವತ್ತು ಅದೇ ಕಾರ್ಯಕ್ರಮಗಳನ್ನ ನಕಲು ಮಾಡಿ ದೆಹಲಿ ವಿಧಾನಸಭೆ ಚುನಾವಣೆ ಎದುರಿಸಲು ಸಿದ್ಧತೆ ಮಾಡಿದೆ.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಡ್ಡಾ, ದೆಹಲಿ ವಿಧಾನಸಭೆ ಚುನಾವಣೆಯ ಪ್ರಚಾರ ಸಭೆಯಲ್ಲಿ ಪ್ರತಿ ಮಹಿಳೆಗೆ 2500 ರೂಪಾಯಿ ನೀಡುವುದಾಗಿ ವಾಗ್ದಾನ ಮಾಡಿದ್ದಾರೆ. ಇನ್ನು ಗರ್ಭಿಣಿಯರಿಗೆ 21,000 ಹಾಗೂ 500 ರೂಪಾಯಿ ಎಲ್ಪಿಜಿ ಸಿಲಿಂಡರ್ ಸಬ್ಸಿಡಿ ಮತ್ತು ಹಬ್ಬಗಳ ಸಂದರ್ಭದಲ್ಲಿ ಎರಡು ಎಲ್ಪಿಜಿ ಸಿಲಿಂಡರ್ ಕೊಡುವ ಭರವಸೆ ನೀಡಿದ್ದಾರೆ.

ಬಿಜೆಪಿ ನೀಡಿರುವ ಯೋಜನೆಗಳ ಬಗ್ಗೆ ಆಮ್ ಆದ್ಮಿ ಪಾರ್ಟಿ ಪಕ್ಷದ ಮುಖಂಡ ಕೇಜ್ರಿವಾಲ್ ವಿರೋಧ ವ್ಯಕ್ತಪಡಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಆದಿಯಾಗಿ ಬಿಜೆಪಿಯ ಎಲ್ಲ ನಾಯಕರು ಕರ್ನಾಟಕದ ಗ್ಯಾರಂಟಿ ಕಾರ್ಯಕ್ರಮಗಳನ್ನು ವಿರೋಧಿಸಿದ್ದರು. ಈಗ ಅದೇ ಮಾದರಿಯ ಕಾರ್ಯಕ್ರಮಗಳನ್ನು ಬಿಜೆಪಿ ಘೋಷಣೆ ಮಾಡಿದೆ. ಹೀಗಾಗಿ ಬಿಜೆಪಿ ಈ ಹಿಂದೆ ನೀಡಿದ ಹೇಳಿಕೆಗಳು ತಪ್ಪು. ಉಚಿತ ಕೊಡುಗೆಗಳಿಂದ ದೇಶ ಹಾಳಾಗುವುದಿಲ್ಲ ಎನ್ನುವುದನ್ನು ಒಪ್ಪಿಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಆದರೆ ಕಾಂಗ್ರೆಸ್ಸಿನ ಯಾವೊಬ್ಬ ನಾಯಕರು ಬಿಜೆಪಿಯ ಉಚಿತ ಕೊಡುಗೆಗಳ ಬಗ್ಗೆ ಪ್ರತಿಕ್ರಿಯೆ ಕೊಟ್ಟಿಲ್ಲ. ಕರ್ನಾಟಕದಲ್ಲಿ ಅಧಿಕಾರ ಕಳೆದುಕೊಳ್ಳುತ್ತಿದ್ದಂತೆ ಸಹನೆ ಕಳೆದುಕೊಂಡ ಬಿಜೆಪಿ, ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿಗಳ ವಿರುದ್ಧ ಟೀಕೆಗಳನ್ನ ಮಾಡಿತು.

ಆದರೆ ಇವತ್ತು ಅಧಿಕಾರಕ್ಕಾಗಿ ಅದೇ ಗ್ಯಾರಂಟಿಗಳ ನಕಲು ಮಾಡುವ ಅನಿವಾರ್ಯತೆಗೆ ಬಿಜೆಪಿ ಬಂದು ನಿಂತಿದೆ. ರಾಜ್ಯ ಬಿಜೆಪಿ ನಾಯಕರು ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಆ ಬಿಜೆಪಿ ಭರವಸೆಗಳ ಬಗ್ಗೆ ಏನು ಹೇಳುತ್ತಾರೆ ಎನ್ನುವುದೇ ಈಗ ಯಕ್ಷ ಪ್ರಶ್ನೆಯಾಗಿದೆ.

ಗಜೇಂದ್ರಗಡದಲ್ಲಿ ನಡೆಯಲಿರುವ 10ನೇ ಜಿಲ್ಲಾ ಸಾಹಿತ್ಯ ಸಮ್ಮೇಳನದ ನಿಮಿತ್ತ ಲೇಖನ

ಜಿಲ್ಲಾ ಸಾಹಿತ್ಯ ಸಮ್ಮೇಳನಗಳ ಅವಲೋಕನ

ಅವಿಭಾಜಿತ ಧಾರವಾಡ ಜಿಲ್ಲೆಯಿಂದ ಬೇರ್ಪಟ್ಟು ದಿ. 24-8-1997ರಂದು ಗದಗ ನೂತನ ಜಿಲ್ಲೆಯಾಯಿತು. ಇದರಿಂದಾಗಿ ಗದಗದ ಕಲೆ ಸಾಹಿತ್ಯ ಸಂಗೀತ ಸಂಸ್ಕೃತಿ ಪ್ರಸರಣಕ್ಕೆ ಹೆಚ್ಚು ಅವಕಾಶ ದೊರಕಿದಂತಾಯಿತು. ನಂತರ 1998ರಲ್ಲಿ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಸ್ತಿತ್ವಕ್ಕೆ ಬರುವ ಮೂಲಕ ಜಿಲ್ಲೆಯಲ್ಲಿ ಸಾಹಿತ್ಯ ಚಟುವಟಿಕೆಗಳನ್ನ ಪರಿಷತ್ತು ಆರಂಭಿಸಿತು. ಜಿಲ್ಲೆಯಲ್ಲಿ ಕಸಾಪ ಅಸ್ತಿತ್ವಕ್ಕೆ ಬಂದು 28 ವರ್ಷಗಳಾಗುತ್ತಾ ಬರುತ್ತಿದ್ದರೂ ಸದ್ಯ ಗಜೇಂದ್ರಗಡದಲ್ಲಿ ಇದೇ ಜ. 20 ಹಾಗೂ 21ರಂದು ನಡೆಯಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೀಗ ಹತ್ತರ ಸಂಭ್ರಮ. ಇದೀಗ ಜಿಲ್ಲೆಯುದ್ದಕ್ಕೂ ಕನ್ನಡದ ಕಲರವ ಕೇಳಿ ಬರುತ್ತದೆ.

ಕನ್ನಡ ಸಾಹಿತ್ಯ ಸಮ್ಮೇಳನಗಳೆಂದರೆ ಅದೊಂದು ಸಾಹಿತ್ಯ ಹಾಗೂ ಸಾಂಸ್ಕೃತಿಕ ಹಬ್ಬ ಕನ್ನಡಿಗರ ಜಾತ್ರೆ, ಕಲಾವಿದರ ನಿಬ್ಬಣ, ಕನ್ನಡ ಅಭಿಮಾನಿಗಳಲ್ಲಿ ತುಂಬಾ ಹುರುಪು-ಹುಮ್ಮಸ್ಸು. ಬುದ್ಧಿಜೀವಿಗಳಿಗೆ, ಉಪನ್ಯಾಸಕರಿಗೆ ಪ್ರಬಂಧ ಮಂಡಿಸುವ, ಹಿರಿ-ಕಿರಿಯ ಕವಿಗಳಿಗೆ ತಮ್ಮ ಕವಿತೆ ಓದುವ, ಚಿತ್ರಕಲೆ, ಸಂಗೀತ, ನಾಟಕ ಕ್ಷೇತ್ರದ ಪ್ರತಿಭೆಗಳಿಗೆ ತಮ್ಮ ಕಲೆಯನ್ನು ಪ್ರದರ್ಶಿಸುವ ತವಕ. ಒಟ್ಟಾರೆಯಾಗಿ ಎಲ್ಲ ಬಗೆಯ ಜನರಿಗೂ ಕೂಡ ಸಮ್ಮೇಳನ ಹೊಸ ಉತ್ಸಾಹ ಉಂಟುಮಾಡುತ್ತದೆ. ಇದೀಗ ಇಂಥ ಅವಕಾಶ ಜಿಲ್ಲೆಯ ಕನ್ನಡ ಮನಸುಗಳಿಗೆ ನಾಲ್ಕೈದು ವರ್ಷಗಳ ನಂತರ ಒದಗಿ ಬರುತ್ತಿದೆ, ಗಜೇಂದ್ರಗಡ ನಗರ 15 ವರ್ಷಗಳ ತರುವಾಯ ಮತ್ತೆ ಎರಡನೇ ಬಾರಿಗೆ ಸಜ್ಜಾಗುತ್ತಿದೆ.

ಗದಗ ಜಿಲ್ಲೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಗಳಿಗೆ ನಾಂದಿ ಹಾಡಿದವರು ಗದಗ ಜಿಲ್ಲೆಯ ಕ.ಸಾ.ಪ. ಪ್ರಥಮ ಚುನಾಯಿತ ಅಧ್ಯಕ್ಷರಾಗಿದ್ದ ಪ್ರೊ. ಸಿ.ವಿ. ಕೆರಿಮನಿ ಅವರು. ಇವರ ಅವಧಿಯಲ್ಲಿ ಗದಗ ಜಿಲ್ಲಾ ಪ್ರಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನವು ಖ್ಯಾತ ವಿಮರ್ಶಕರಾದ ಡಾ. ಗಿರಡ್ಡಿ ಗೋವಿಂದರಾಜ ಅವರ ಸರ್ವಾಧ್ಯಕ್ಷತೆಯಲ್ಲಿ ಮುಂಡರಗಿಯ ಬೆಲ್ಲದ ಮಹಾವಿದ್ಯಾಲಯದ ಮೈದಾನದಲ್ಲಿ 2000ದ ಜನವರಿ 29 ಹಾಗೂ 30ರಂದು ಅರ್ಥಪೂರ್ಣವಾಗಿ ಜರಗಿತು. 2ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಲಕ್ಷ್ಮೇಶ್ವರ ನಗರದ ಕೆ.ಎಸ್.ಆರ್.ಟಿ.ಸಿ. ಸಮುದಾಯ ಭವನದಲ್ಲಿ ಖ್ಯಾತ ಕಥೆಗಾರರು, ಸಾಹಿತಿಗಳಾದ ಡಾ. ಮನು ಬಳಿಗಾರರ ಸರ್ವಾಧ್ಯಕ್ಷತೆಯಲ್ಲಿ 2004 ಜುಲೈ 4 ಹಾಗೂ 4ರಂದು ಜರುಗಿತು.

ಈ ಎರಡು ಸಮ್ಮೇಳನಗಳ ಅವಧಿಯಲ್ಲಿ ಎರಡು ಬಾರಿ ಜಿಲ್ಲಾ ಕಸಾಪಕ್ಕೆ ಆಯ್ಕೆಯಾಗಿದ್ದ ಪ್ರೋ. ಸಿ.ವಿ. ಕೆರಿಮನಿಯವರು ಅಧ್ಯಕ್ಷರಾಗಿದ್ದರು. 3ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಗದಗಿನ ಕೆ.ಎಚ್. ಪಾಟೀಲ ಸಭಾಭವನದಲ್ಲಿ ನಾಡಿನ ಖ್ಯಾತ ವಿಮರ್ಶಕ ಡಾ. ಜಿ.ಎಸ್. ಅಮೂರ ಅವರ ಸರ್ವಾಧ್ಯಕ್ಷತೆಯಲ್ಲಿ 2008 ಮಾರ್ಚ್ 8 ಹಾಗೂ 9ರಂದು ಅರ್ಥಪೂರ್ಣವಾಗಿ ಜರುಗಿತು. ಈ ಸಂದರ್ಭದಲ್ಲಿ ಪ್ರೊ. ಕೆ.ಬಿ. ತಳಗೇರಿ ಜಿಲ್ಲಾ ಕಸಾಪ ಅಧ್ಯಕ್ಷರಾಗಿದ್ದರು. 4ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಕೋಟೆ ನಾಡು ಗಜೇಂದ್ರಗಡದ ಎಪಿಎಂಸಿ ಎದುರಿನ ಪುರಸಭೆಯ ಬಯಲು ಜಾಗಯಲ್ಲಿ 2011 ಫೆಬ್ರವರಿ 11, 12 ಹಾಗೂ 13ರಂದು ಮಾಜಿ ಶಾಸಕರು, ಸಾಹಿತಿಗಳಾಗಿದ್ದ ಜ್ಞಾನದೇವ ದೊಡ್ಡಮೇಟಿಯವರ ಸರ್ವಾಧ್ಯಕ್ಷತೆಯಲ್ಲಿ ಜರುಗಿತು.

ಈ ಅವಧಿಯಲ್ಲಿ ಮುಂಡರಗಿಯ ಎ.ಬಿ. ಹಿರೇಮಠರು ಜಿಲ್ಲಾ ಕಸಾಪ ಅಧ್ಯಕ್ಷರಾಗಿದ್ದರು. 5ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಮುಂಡರಗಿಯ ಶ್ರೀ ಜ.ಅ. ಪ್ರೌಢಶಾಲೆಯ ಆವರಣದಲ್ಲಿ 2013 ಜೂನ್ 15 ಹಾಗೂ 16ರಂದು ಮುಂಡರಗಿ ಸಂಸ್ಥಾನ ಮಠದ ಶ್ರೀ ಮ.ನಿ.ಪ್ರ.ಜಗದ್ಗುರು ನಾಡೋಜ ಡಾ. ಅನ್ನದಾನೇಶ್ವರ ಮಹಾಶಿವಯೋಗಿಗಳು ಇವರ ಸರ್ವಾಧ್ಯಕ್ಷತೆಯಲ್ಲಿ ಜರುಗಿತು. 6ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ರೋಣದ ರಾಜೀವ್ ಗಾಂಧಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ 2014 ಫೆಬ್ರುವರಿ 22 ಹಾಗೂ 23ರಂದು ಖ್ಯಾತ ಕವಿ, ಜಾನಪದ ವಿದ್ವಾಂಸ ಡಾ. ಸೋಮಶೇಖರ ಇಮ್ರಾಪುರ ಅವರ ಸರ್ವಾಧ್ಯಕ್ಷತೆಯಲ್ಲಿ ಜರುಗಿತು.

7ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಗದುಗಿನ ಕೆ.ಎಚ್. ಪಾಟೀಲ್ ಸಭಾಭವನದಲ್ಲಿ 2015 ಸೆಪ್ಟೆಂಬರ 19 ಮತ್ತು 20ರಂದು ಖ್ಯಾತ ವಿಮರ್ಶಕರಾದ ಡಾ. ಶ್ಯಾಮಸುಂದರ ಬಿದರಕುಂದಿ ಅವರ ಸರ್ವಾಧ್ಯಕ್ಷತೆಯಲ್ಲಿ ಜರುಗಿತು. ಈ ಮೇಲಿನ ಮೂರು ಸಮ್ಮೇಳನಗಳ ಅವಧಿಯಲ್ಲಿ ಡಾ. ಶಿವಪ್ಪ ಕುರಿಯವರು ಜಿಲ್ಲಾ ಕಸಾಪ ಅಧ್ಯಕ್ಷರಾಗಿದ್ದರು.

8ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಶಿರಹಟ್ಟಿಯ ಎಫ್. ಎಂ. ಡಬಾಲಿ ವಿದ್ಯಾಲಯದ ಆವರಣದಲ್ಲಿ 2016 ಡಿಸೆಂಬರ್ 17 ಹಾಗೂ 18ರಂದು ಖ್ಯಾತ ಮಕ್ಕಳ ಸಾಹಿತಿ ಹಾಸ್ಯ ಬರಹಗಾರ ಎಂ.ಡಿ. ಗೋಗೇರಿ ಅವರ ಅಧ್ಯಕ್ಷತೆಯಲ್ಲಿ ಅರ್ಥಪೂರ್ಣವಾಗಿ ಜರುಗಿತು. 9ನೇ ಕನ್ನಡ ಸಾಹಿತ್ಯ ಸಮ್ಮೇಳನ 2021 ಫೆಬ್ರವರಿ 27 ಹಾಗೂ 28ರಂದು ಗದುಗಿನ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಹಿರಿಯ ಲೇಖಕರು, ಶಿಕ್ಷಣ ತಜ್ಞರು ಆದ ಪ್ರೊ. ರವೀಂದ್ರ ಕೊಪ್ಪರ ಅವರ ಸರ್ವಾಧ್ಯಕ್ಷತೆಯಲ್ಲಿ ಜರುಗಿತು. ಈ ಮೇಲಿನ ಎರಡೂ ಸಮ್ಮೇಳನಗಳ ಸಂದರ್ಭದಲ್ಲಿ ಡಾ. ಶರಣು ಗೋಗೇರಿ ಅವರು ಜಿಲ್ಲಾ ಕಸಾಪ ಅಧ್ಯಕ್ಷರಾಗಿದ್ದರು.

ಪ್ರಸ್ತುತ 10ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಗಜೇಂದ್ರಗಡ ನಗರದ ಸಿಬಿಎಸ್‌ಸಿ ಶಾಲೆಯ ಆವರಣದಲ್ಲಿ ಇದೇ ಜನವರಿ 20 ಹಾಗೂ 21ರಂದು ಖ್ಯಾತ ಕವಿಗಳು, ಹಿರಿಯ ಸಾಹಿತಿಗಳು ಆದ ಪ್ರೊ. ಚಂದ್ರಶೇಖರ ವಸ್ತ್ರದ ಅವರ ಸರ್ವಾಧ್ಯಕ್ಷತೆಯಲ್ಲಿ ಜರುಗಲಿದೆ. ಈ ಸಂದರ್ಭದಲ್ಲಿ "ಅಂತರಗಂಗೆ" ಎಂಬ ಸ್ಮರಣ ಸಂಚಿಕೆಯನ್ನು ಹೊರತರಲಾಗುತ್ತಿದೆ. ಜಿಲ್ಲಾ ಕಸಾಪ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ಹಾಗೂ ಸ್ವಾಗತ ಸಮಿತಿ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲರ ನೇತೃತ್ವದಲ್ಲಿ ಸಮ್ಮೇಳನವು ಜರುಗಲಿದೆ. ಬನ್ನಿ ಎಲ್ಲರೂ ಭಾಗವಹಿಸೋಣ, ಕನ್ನಡ ಸಾಹಿತ್ಯದ ಘಮಲನ್ನು ಎಲ್ಲ ಕಡೆಗೆ ಪಸರಿಸೋಣ.

- ಡಾ. ರಾಜೇಂದ್ರ ಎಸ್.ಗಡಾದ.
ಮಾಜಿ ಅಧ್ಯಕ್ಷರು-ತಾಕಸಾಪ, ಗದಗ.
ಜಿಲ್ಲಾಧ್ಯಕ್ಷರು, ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು ಗದಗ.

ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ರಾಯಲ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ 2024-25ನೇ ಸಾಲಿನಲ್ಲಿ ವಿವಿಧ ಸ್ಪರ್ಧೆ, ಆಟೋಟಗಳಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಪಾರಿತೋಷಕ ವಿತರಣಾ ಸಮಾರಂಭ ನೆರವೇರಿತು.

ಸಮಾರಂಭದ ಮುಖ್ಯ ಅತಿಥಿಗಳಾಗಿ ಸಿ.ಆರ್.ಪಿ ಎಸ್.ಸಿ. ಹಿರೇಮಠ ಆಗಮಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಧಿಕಾರಿಗಳಾದ ಎ.ಎಂ. ಢಾಲಾಯತ ವಹಿಸಿದ್ದರು. ಸರ್ವರನ್ನೂ ಮುಖ್ಯೋಪಾಧ್ಯಾಯರಾದ ಎಸ್. ಎಸ್. ಕುಂಬಾರ ಸ್ವಾಗತಿಸಿದರು. ಮುಖ್ಯ ಅತಿಥಿಗಳನ್ನು ರವಿಚಂದ್ರನ್ ಪರಿಚಯಿಸಿದರು. ಹಿರೇಮಠ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮವನ್ನು ಸಾನಿಯಾ ಮುಲ್ಲಾ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ವಿಭಾಗದ ಬಹುಮಾನ ವಿತರಣೆಯನ್ನು ಶಹನಾಜ ತಂಬ್ರಹಳ್ಳಿ ಮಾಡಿದರು. ಪೂರ್ವ ಪ್ರಾಥಮಿಕ ವಿಭಾಗದ ಬಹುಮಾನ ವಿತರಣೆಯನ್ನು ಲಕ್ಷ್ಮೀ ಕಲ್ಲೂರ್ ಮಾಡಿದರು. ಹೈಸ್ಕೂಲ್ ವಿಭಾಗದ ಬಹುಮಾನ ವಿತರಣೆಯನ್ನು ಅಂಜುಮ ಈಟಿ ಮಾಡಿದರು. ಕ್ರೀಡಾಕೂಟ ಭಾಗದ ಬಹುಮಾನ ವಿತರಣೆಯನ್ನು ಮೋಹನ್ ಬಳ್ಳಾರಿ ನೆರವೇರಿಸಿದರು.

ಈ ಸಂದರ್ಭದಲ್ಲಿ ದ್ರಾಕ್ಷಾಯಿಣಿ ಗುಡಿಗೇರಿ, ಆಫ್ರಿನ್ ತಹಸೀಲ್ದಾರ್, ಶಿಲ್ಪಾ ತಳಗೇರಿ, ಪುಷ್ಪಾ ಮೆಣಸಿಗಿ, ಯಾಸ್ಮಿನ್ ಬಳ್ಳಾರಿ, ಜಿನಥ್ ಮಾಲ್ದಾರ್, ಪರಝಾನಾ ಧಾರವಾಡ, ನಿಖಿತ್ತ ನರಗುಂದ, ಸೌಮ್ಯ ಸರ್ವಿ, ವೀಣಾ ಪಾ.ವಿ., ಸಿಬ್ಬಂದಿ ವರ್ಗದವರು ಹಾಗೂ ಎಲ್ಲ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು ಎಂದು ಶಾಲಾ ಆಡಳಿತ ಅಧಿಕಾರಿ ಎ.ಎಂ. ಢಾಲಾಯತ ತಿಳಿಸಿದ್ದಾರೆ.

ಕೆಎಲ್ಇ ಔಷಧ ಮಹಾವಿದ್ಯಾಲಯದಲ್ಲಿ ರಕ್ತದಾನ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ತ್ಯಾಗವೀರ ಶ್ರೀ ಸಿರಸಂಗಿ ಲಿಂಗರಾಜರ 164ನೇ ಜನ್ಮದಿನದ ಅಂಗವಾಗಿ ಕೆಎಲ್ಇ ಸಂಸ್ಥೆಯ ಔಷಧ ಮಹಾವಿದ್ಯಾಲಯ ಗದಗ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಮತ್ತು ಐ.ಎಂ.ಎ. ರಕ್ತನಿಧಿ ಇವರ ಸಹಯೋಗದಲ್ಲಿ ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮವನ್ನು ತ್ಯಾಗವೀರ ಶ್ರೀ ಸಿರಸಂಗಿ ಲಿಂಗರಾಜ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡುವುದರ ಮೂಲಕ ಅತಿಥಿಗಳು ಚಾಲನೆ ನೀಡಿದರು. ವಿದ್ಯಾಲಯದ ಪ್ರಾಶುಂಪಾಲರಾದ ಡಾ. ರಮೇಶ ವ್ಹಿ ಕಾರ್ಯಕ್ರಮವನ್ನು ಉದ್ದೇಶಿಸಿ ತ್ಯಾಗವೀರ ಶ್ರೀ ಸಿರಸಂಗಿ ಲಿಂಗರಾಜರವರ ಶಿಕ್ಷಣದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ. ರಾಜಶೇಖರ ಪವಾಡಶೆಟ್ಟರ್ ಅವರು ರಕ್ತದಾನದ ಮಹತ್ವ ಹಾಗೂ ಅದರಿಂದಾಗುವ ಸದುಪಯೋಗಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿದರು. ವಿದ್ಯಾಲಯದ ಎನ್.ಎಸ್.ಎಸ್. ಕೋಶದ ಸಂಯೋಜನಾಧಿಕಾರಿ ರವಿ ಸೊಂಡುರ ಅತಿಥಿಗಳನ್ನು ಸ್ವಾಗತಿಸಿದರು. ಎನ್.ಎಸ್.ಎಸ್ ಕೋಶದ ಸಂಯೋಜಕ ಶ್ರೀಧರ ಡಮಾಮಿ ನಿರೂಪಿಸಿದರು. ಡಾ. ಜಯತೀರ್ಥ ಲೋಕಾಪುರ ವಂದನಾರ್ಪನೆ ಮಾಡಿದರು.

ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ರಕ್ತದಾನ ಮಾಡಿದವರಿಗೆ ಪ್ರಮಾಣಪತ್ರಗಳನ್ನು ನೀಡಲಾಯಿತು.

ಪ್ರತಿಭಾ ಕಾರಂಜಿಯಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಮುಂಡರಗಿ ನಗರದಲ್ಲಿ ನಡೆದ ತಾಲೂಕು ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿ ಸರಸ್ವತಿ ಮ.ಆನದಂರಬಾವಿ ಜಾನಪದ ಗೀತೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ಭಾವಗೀತೆ ಸ್ಪರ್ಧೆಯಲ್ಲಿ ಭಾವನಾ ಯಲಿಗಾರ ತೃತೀತ ಸ್ಥಾನ ಪಡೆದಿದ್ದಾಳೆ. ಕವ್ವಾಲಿಯಲ್ಲಿ ಸಮರೀನ್ ಅತ್ತಾರ, ಭಾಗ್ಯ ರಾಫಣ್ಣವರ, ರುದ್ರಮ್ಮ ಗುರುವಿನ, ಜಲಜಾಕ್ಷಿ ಕಿಲಾರಿ, ದೇವಮ್ಮ ರಾಫಣ್ಣವರ, ಸುನೇರನಾಜ್ ದೊಡ್ಡಮನಿ, ತೃತೀಯ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ. ವಿಜೇತ ಮಕ್ಕಳಿಗೆ ಸಂಸ್ಥೆಯ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಹಾಗೂ ಮುಖ್ಯೋಪಾಧ್ಯಾಯ ಎಸ್.ಎನ್. ಕಲ್ಲಿಗನೂರ, ಮಾರ್ಗದರ್ಶನ ಮಾಡಿದ ಸಂಗೀತ ಶಿಕ್ಷಕರಾದ ಮೃತ್ಯುಂಜಯ ಎಚ್.ಹಿರೇಮಠ, ಎ.ವಿ. ಹಿರೇಮಠ, ಎ.ಬಿ. ಬೇವಿನಕಟ್ಟಿ, ವಿ.ಎಸ್. ಹಿರೇಮಠ, ಎಸ್.ಎಮ್. ಹಂಚಿನಾಳ, ಡಿ.ಎಮ್. ರಾಠೋಡ, ಬಿ.ಎಸ್. ಕಣವಿ, ಬಿ.ಎನ್. ಅಂಗಡಿ ಸಾಧಕ ವಿದ್ಯಾರ್ಥಿನಿಯರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಮಿ ವಿವೇಕಾನಂದರ 162ನೇ ಜನ್ಮದಿನೋತ್ಸವದ ಪ್ರಯುಕ್ತ ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಬೆಂಗಳೂರು ಇವರು ಗೋಕಾಕದ ಸತೀಶ ಜಾರಕಿಹೊಳಿ ಫೌಂಡೇಶನ್ ಹಾಗೂ ಶ್ರೀ ವಿವೇಕಾನಂದ ಯೋಗ ಮತ್ತು ಸಂಸ್ಕೃತಿ ವಿಕಾಸ ಸಂಘ ಇವರುಗಳ ಸಹಯೋಗದಲ್ಲಿ ಇತ್ತೀಚೆಗೆ ಎಚ್.ಕೆ.ಜಿ.ಎನ್. ಹಾಲ್ ಗೋಕಾಕದಲ್ಲಿ ನಡೆಸಿದ 3ನೇ ಕರ್ನಾಟಕ ರಾಜ್ಯ ಯೋಗಾಸನ ಸ್ಪೋರ್ಟ್ಸ್ ಲೀಗ್ ಸ್ಪರ್ಧೆಗಳಲ್ಲಿ ಶ್ರೀಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗಪಾಠಶ

ಉಡಿ ತುಂಬುವ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿಯ ಶ್ರೀ ಜಗದಂಬಾ ಮಹಿಳಾ ಮಂಡಳದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಸಂಕ್ರಾಂತಿ ಹಬ್ಬದ ನಿಮಿತ್ತ ಶನಿವಾರ ಸಾಯಂಕಾಲ 6 ಗಂಟೆಗೆ ಎಸ್.ಎಸ್.ಕೆ. ಸಮಾಜದ ಮಹಿಳೆಯರಿಗಾಗಿ ಉಡಿ ತುಂಬುವ ಕಾರ್ಯಕ್ರಮವನ್ನು ಶ್ರೀಮತಿ ಮುನ್ನೂಬಾಯಿ ಈಶ್ವರಸಾ ಖೋಡೆ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರಣ, ಬೆಟಗೇರಿ ಭಾಗದ ಸಮಸ್ತ ಎಸ್.ಎಸ್.ಕೆ. ಸಮಾಜದ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಶ್ರೀ ಜಗದಂಬಾ ಮಹಿಳಾ ಮಂಡಳದ ಅಧ್ಯಕ್ಷೆ ಸರೋಜಾಬಾಯಿ ಎಚ್.ಕಬಾಡಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

ರಾಜೀವಗಾಂಧಿ ಬಿಇಡಿ ಕಾಲೇಜಿಗೆ ಉತ್ತಮ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ರಾಜೀವಗಾಂಧಿ ಮಹಾವಿದ್ಯಾಲಯದ 2023-24ನೇ ಸಾಲಿನ ಬಿಇಡಿ ಫಲಿತಾಂಶ ಪ್ರಕಟಗೊಂಡಿದ್ದು, ಕಾಲೇಜಿನ ಪ್ರತಿಭಾ ತಿಮ್ಮಣಗೌಡ್ರ ಶೇ.91.04 ಅಂಕಗಳನ್ನು ಗಳಿಸುವ ಮೂಲಕ ಪ್ರಥಮ, ಅನಿಲ ಹಿರೇಗೌಡ್ರ ಶೇ.91.00 ಅಂಕಗಳನ್ನು ಗಳಿಸಿ ದ್ವಿತೀಯ, ಈರಮ್ಮ ಗಾಣಿಗೇರ ಶೇ.90.08 ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದು, ಕಾಲೇಜು ಶೇ.100ರಷ್ಟು ಪ್ರಗತಿಯನ್ನು ಸಾಧಿಸಿದೆ.

ಶಿಕ್ಷಣ ಸಂಸ್ಥೆಯ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ, ಸಂಗನಗೌಡ ಪಾಟೀಲ, ಪ್ರಾಚಾರ್ಯ ವಾಯ್.ಎನ್. ಪಾಪಣ್ಣವರ ಸೇರಿದಂತೆ ಆಡಳಿತ ಮಂಡಳಿಯ ನಿರ್ದೇಶಕರು, ಶಿಕ್ಷಕರು, ಸಿಬ್ಬಂದಿಗಳು ಪ್ರಶಿಕ್ಷಣಾರ್ಥಿಗಳಿಗೆ ಅಭಿನಂದನೆಯನ್ನು ಸಲ್ಲಿಸಿದ್ದಾರೆ.

ಅಖಿಲ ಕರ್ನಾಟಕ ಮೋಚಿಗಾರ ಸಂಘದ ಸರ್ವ ಸದಸ್ಯರ ಸಭೆಯಲ್ಲಿ ಬಸವರಾಜ ಮಾಲಗಿತ್ತಿ

ಸಂಘಟಿತರಾಗಿ ಒಳಮೀಸಲಾತಿಗಾಗಿ ಹೋರಾಡೋಣ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು/ಗದಗ

ಅಖಿಲ ಕರ್ನಾಟಕ ಮೋಚಿಗಾರ ಸಂಘದ ಸಮಸ್ತ ಬಾಂಧವರ ಉಪಸ್ಥಿತಿಯಲ್ಲಿ ಜ.31ರೊಳಗಾಗಿ 2 ಲಕ್ಷ ಮೋಚಿಗಾರ ಸಮಾಜ ಬಾಂಧವರು ಒಟ್ಟಾಗಿ ಕೂಡಿಕೊಂಡು ಒಳ ಮೀಸಲಾತಿ ಅನುಷ್ಠಾನಕ್ಕೆ ಒತ್ತಾಯಿಸಿರುವ ಅಭಿಪ್ರಾಯಗಳ ಮನವಿ ಪತ್ರವನ್ನು ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ ಅವರಿಗೆ ಸಲ್ಲಿಸೋಣ. ಅಖಿಲ ಕರ್ನಾಟಕ ಮೋಚಿಗಾರ ಸಂಘದ ರಾಜ್ಯಾಧಕ್ಷರಾಗಿ ಮೋಚಿಗಾರ ಸಮಾಜವನ್ನು ಸಂಘಟಿಸಿ, ಬಲಿಷ್ಠಗೊಳಿಸಿ, ಸಮಾಜವನ್ನು ಪ್ರಗತಿಯತ್ತ ಕೊಂಡಯ್ಯುತ್ತಿರುವ ಶಿವಪ್ಪ ಮುಳಗುಂದ ಅವರೇ ಮುಂದುವರೆಯಲಿ ಎಂದು ನಿವೃತ್ತ ಉಪ ಪೊಲೀಸ್ ಆಯುಕ್ತರಾದ ಬಸವರಾಜ ಮಾಲಗತ್ತಿ ಹೇಳಿದರು.

ವಿಜಯನಗರದಲ್ಲಿರುವ ಸಮುದಾಯ ಭವನದಲ್ಲಿ ಅಖಿಲ ಕರ್ನಾಟಕ ಮೋಚಿಗಾರ ಸಂಘದ ನೂತನ ಸಭಾಭವನ ಹಾಗೂ ಸಮಾಜ ಬಾಂಧವರ ಸರ್ವ ಸದಸ್ಯರ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯಾದ್ಯಂತ ಮೋಚಿಗಾರ ಸಮಾಜ ಬಾಂಧವರು 2 ಲಕ್ಷಕ್ಕೂ ಅಧಿಕ ಸಂಖ್ಯೆಯಲ್ಲಿದ್ದಾರೆ. ಸಮಗಾರ, ಡೋರ ಮತ್ತು ಮೋಚಿಗಾರ ಸಂಘಟನೆಯ ತ್ರಿಮಸ್ಥ ಸಮುದಾಯ 19 ಲಕ್ಷಕ್ಕೂ ಅಧಿಕ ಬಾಂಧವರಿದ್ದಾರೆ. ತ್ರಿಮತಸ್ಥ ಬದಲಿಗೆ ಮೋಚಿಗಾರ ಬಾಂಧವರ ಬೆಂಬಲದಿಂದ ಒಳಮೀಸಲಾತಿಗಾಗಿ ಹೋರಾಡೋಣ. ಜ. 31ರೊಳಗಾಗಿ ನಿ. ನ್ಯಾಯಮೂರ್ತಿ ನಾಗಮೋಹನದಾಸ ಅವರಿಗೆ ಸಮುದಾಯ ಬಾಂಧವರಿಂದ ಸಂಗ್ರಹಿಸಿರುವ ಅಬಿಪ್ರಾಯಗಳ

ವರದಿಯನ್ನು ನೀಡಿ ಒತ್ತಾಯಿಸೋಣ. ಜೊತೆ-ಗೆ ಮೋಚಿಗಾರ ಸಮುದಾಯದ ಗುರು ಆಯ್ಕೆ ಕುರಿತಂತೆ ತಮ್ಮ ಜಿಲ್ಲೆಗಳಲ್ಲಿ ಗುರು ಅರ್ಹತೆ ವ್ಯಕ್ತಿತ್ವ ಹೊಂದಿರುವವರ ಮಾಹಿತಿ ಸಂಗ್ರಹಿಸಿ ರಾಜ್ಯದ ಕೇಂದ್ರ ಕಾರ್ಯಾಲಯಕ್ಕೆ ರವಾನಿಸಿ, ಚರ್ಚಿಸಿ, ನಿರ್ಣಯ ಕೈಗೊಳ್ಳೋಣ ಎಂದರು.

ಸಂಘದ ರಾಜ್ಯ ಉಪಾಧ್ಯಕ್ಷ ಆರ್.ಕೆ. ಸುರಪುರ ಸಾಚಿದರ್ಭಿಕವಾಗಿ ಮಾತನಾಡಿದರು. ಬಿ.ಆರ್. ರಾವ್ ಮಾತನಾಡಿ, ಸಮುದಾಯ ಭವನದ ಕಾಮಗಾರಿಗಾಗಿ 4 ಲಕ್ಷ ರೂ ನೀಡುವ ಘೋಷಣೆ ಮಾಡಿದರು.

ವೇದಿಕೆಯ ಮೇಲೆ ಆಸ್ತಿ ಸಂರಕ್ಷಣಾ ಸಮಿತಿಯ ಗೌರವಾಧ್ಯಕ್ಷ ಹಾಗೂ ನಿವೃತ್ತ ಪೊಲೀಸ್ ವರಿಷ್ಠಾಧಕಾರಿ ಬಿ.ಎಸ್. ಮರತೂರಕರ, ರಾಜ್ಯ ಉಪಾಧ್ಯಕ್ಷೆ ಶ್ರೀದೇವಿ ಬಿ.ಮರತೂರಕರ, ಆರ್.ಕೆ. ಸುರಪುರ, ಮಲ್ಲೇಶಪ್ಪ ಬಂಕಾಪೂರ, ರಾಜ್ಯ ಪ್ರಧಾನ ಕಾರ್ಯದರ್ಶಿ ದೀಪಕ ಕೆಂಭಾವಿ, ರಾಜ್ಯ ಕಾರ್ಯ ನಿರ್ವಾಹಕ ನಿರ್ದೇಶಕ ಎಮ್.ಬಿ. ಇನಾಮದಾರ, ರಾಜ್ಯ ಸಂಘಟನಾ ಕಾರ್ಯದರ್ಶಿ ಶಂಕ್ರರಪ್ಪ ರೋಣದ, ರಾಜ್ಯ ಸ. ಕಾರ್ಯದರ್ಶಿ ಎಚ್.ಎಸ್. ಸ್ವಾಮಿ, ಸತ್ಯನಾರಾಯಣ ನಿಡಗಲ್, ರಾಜ್ಯ ಖಜಾಂಚಿ ರಾಮಚಂದ್ರಪ್ಪ ಅಡ್ಡೇದಾರ, ಆಂತರಿಕ ಲೆಕ್ಕ ಪರಿಶೋಧಕ ಮಾಲತೇಶ ಮೈಸೂರು, ಖಾಯಂ ಆಹ್ವಾನಿತ ಸದಸ್ಯರಾದ ನವಲಗುಂದ ಯಲ್ಲಪ್ಪ, ಕೆ.ವ್ಹಾಯ್. ಕೊಪ್ಪರಕರ, ನಾಗರತ್ನ ಶಿವಪ್ಪ ಮುಳಗುಂದ, ಹನುಮಂತಪ್ಪ ಬಂಕಾಪೂರ, ಮಹಾದೇವ ಸ್ವಾದಿ, ರವಿ ಗೌಡರ, ಎಚ್.ವ್ಹಾಯ್. ಮಹಾದೇವ, ರಾಷ್ಟ್ರಪ್ರಶಸ್ತಿ ಪುರಸ್ಕೃತರಾದ ಗೌರಯ್ಯ, ಗಲ್ಬರ್ಗಾ ಜಿಲ್ಲಾಧ್ಯಕ್ಷ ಕಾಶಿರಾಯ ನಂದೂರಕರ, ಬೀಮರಾಜ ದೇಗಲಮಡಿ, ಚಂದ್ರಶೇಖರ ದೇಗಲಮಡಿ, ಎಸ್.ರಾಜಣ್ಣ, ನಾರಾಯಣ ಕಲಬುರ್ಗಿ, ಮಲ್ಲಿಕಾರ್ಜುನ ಜಿರಟ್ಟಿ, ಉಮೇಶ ನರಗುಂದ, ಪ್ರಶಾಂತ ನರೇಂದ್ರ, ಸಿದ್ದಣ್ಣ ಭಾವಿಮನಿ, ದೊಡ್ಡಮನಿ, ದಾನಪ್ಪ ಕವಲೂರು, ವೀರಣ್ಣ ತಾವರಗೇರಿ, ಮಂಜಪ್ಪ ದರಗದಕಟ್ಟಿ, ದಾನಪ್ಪ ಕವಲೂರು, ವಿರೂಪಾಕ್ಷ ಮೈಸೂರು, ಮಂಜುನಾಥ ಮೈಸೂರು, ಮೋಹನ ಗೌಡರ, ಅರ್ಜುನಪ್ಪ ಸಂದಿಮನಿ, ಶಿವಾನಂದ ಗೌಡರ, ವಿರೂಪಾಕ್ಷಪ್ಪ ದೊಡ್ಡಮನಿ, ಬಸವರಾಜ ಕರ್ಜಗಿ, ಲಕ್ಷ್ಮಣ ದಿಗ್ಗಾವಿ, ಅಶೋಕ ಮೈಸೂರ, ರೇವಣ್ಣ ಕಡೇಮನಿ, ವಿರೂಪಾಕ್ಷಪ್ಪ ದೊಡ್ಡಮನಿ, ಬಸವರಾಜ ಬೆಂಡಿಗೇರಿ, ಸೇರಿದಂತೆ ರಾಜ್ಯದ ವಿವಿಧ ಜಿಲ್ಲಾಧ್ಯಕರು, ಪದಾಧಿಕಾರಿಗಳು ಹಾಗೂ ಸಮುದಾಯ ಬಾಂಧವರಿದ್ದರು.

ಸಮುದಾಯದ ಯುವ ಬಾಂಧವ ಮಂಜುನಾಥ ಎಸ್.ಮುಳಗುಂದ ಅವರು ನಿರೂಪಿಸಿದರು.

> ಸಂಘದ ರಾಜ್ಯಾಧ್ಯಕ್ಷ ಶಿವಪ್ಪ ಮುಳಗುಂದ ಅಧ್ಯಕ್ಷತೆ ವಹಿಸಿ ಮಾತನಾಡಿ, ಅಖಿಲ ಕರ್ನಾಟಕ ಮೋಚಿಗಾರ ಸಂಘದ ರಾಜ್ಯಾಧ್ಯಕ್ಷನಾಗಿ ಕಳೆದ 20 ವರ್ಷಗಳಿಂದ ಸಮಾಜ ಸಂಘಟನೆಯೊಂದಿಗೆ ಸಮುದಾಯ ಭವನವನ್ನು ಹಂತ ಹಂತವಾಗಿ ನಿರ್ಮಿಸಿರುವ ತೃಪ್ತಿ ನನಗಿದೆ. ಮೋಚಿಗಾರ ಸಮುದಾಯ ಭವನದ ಆಸ್ತಿ ಸಂರಕ್ಷಣಾ ಸಮಿತಿಯ ಅಧ್ಯಕ್ಷರಾದ ಬಸವರಾಜ ಮಾಲಗಿತ್ತಿ ಹಾಗೂ ಡಾ. ಬಿ.ಎಸ್. ಮರತೂರಕರ ನೇತೃತ್ವದ ಸಮಸ್ತ ಅಖಿಲ ಕರ್ನಾಟಕ ಮೋಚಿಗಾರ ಸಮುದಾಯದ ಬೆಂಬಲದ ಸಹಕಾರ ನನಗಿದ್ದರೆ ಮತ್ತೆ ಹೊಣೆಯನ್ನು ನಿರ್ವಹಿಸಲು ನಾನು ಸಿದ್ಧನಿದ್ದೇನೆ. ಮೋಚಿಗಾರ ಸಮಾಜವನ್ನು ರಾಜ್ಯಮಟ್ಟದಲ್ಲಿ ಬಲಿಷ್ಠವಾಗಿ ಕಟ್ಟಲು ನಾನು ಉತ್ಸುಕನಾಗಿದ್ದೇನೆ ಎಂದರು.

ಸಿದ್ಧರಾಮೇಶ್ವರ, ಸ್ವಾಮಿ ವಿವೇಕಾನಂದ ಜಯಂತಿ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿವಯೋಗಿ ಸಿದ್ಧರಾಮೇಶ್ವರ ಮತ್ತು ಸ್ವಾಮಿ ವಿವೇಕಾನಂದರ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್.ಡಿ.ಎಂ.ಸಿ ಅಧ್ಯಕ್ಷ ಮರಿಯಪ್ಪ ವಡ್ಡರ ಮಾತನಾಡಿ, ವಿವೇಕಾನಂದರು ರಾಮಕೃಷ್ಣ ಪರಮಹಂಸರ ಮತ್ತು ಶಾರದಾ ದೇವಿ ಅವರು ಶಿಷ್ಯರಾಗಿದ್ದರು. ದೇಶದ ಜನರು ಮೌಢ್ಯತೆಯಲ್ಲಿದ್ದ ಸಂದರ್ಭದಲ್ಲಿ ವಿಶ್ವ ಚೇತನ, ವೀರಪುರುಷ ವಿವೇಕಾನಂದರು ವಿಶ್ವದ ಎಲ್ಲ ಜನಾಂಗವು ಸನಾತನ ಧರ್ಮದ ಮೇಲೆಯೇ ನಿಂತಿದೆ ಎಂದು ತಿಳಿಸಿಕೊಟ್ಟರು. ಸೊನ್ನಲಿಗಿ ಸಿದ್ಧರಾಮೇಶ್ವರರು

ಶ್ರೀ ಶೈಲ ಮಲ್ಲಿಕಾರ್ಜುನನ್ನು ಒಲಿಸಿಕೊಂಡಿರುವ ಕುರಿತು ಮತ್ತು ಅಲ್ಲಮಪ್ರಭುಗಳ ಅಧ್ಯಕ್ಷತೆಯಲ್ಲಿ ನಡೆದ ಅನುಭವ ಮಂಟಪದಲ್ಲಿ ಸಿದ್ಧರಾಮೇಶ್ವರ ಪಾತ್ರ ಕುರಿತು ವಿವರಿಸಿದರು.

ಶಿಕ್ಷಕಿ ಜೆ.ಆರ್. ಕುಲಕರ್ಣಿ ಮಾತನಾಡಿ, ದೇಶ ಕಂಡ ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರು. ಭಾರತದ ಹಿರಿಮೆಯನ್ನು ಚಿಕ್ಯಾಗೋದಲ್ಲಿ ಎತ್ತಿ ಹಿಡಿದರು. ವಿದ್ಯಾರ್ಥಿಗಳು ಅವರ ಜೀವನ ಚರಿತ್ರೆಯ ಪುಸ್ತಕವನ್ನು ಓದಬೇಕೆಂದರು.

ಗ್ರಾ.ಪಂ ಸದಸ್ಯರಾದ ವೀರಣ್ಣ ಚಕ್ರಸಾಲಿ, ವಿರೂಪಾಕ್ಷಪ್ಪ ಬೆಟಗೇರಿ, ಹಾಗೂ ಎಸ್.ಡಿ.ಎಂ.ಸಿ ಸದಸ್ಯರಾದ ನಿಂಗಮ್ಮ ಉಮಚಗಿ, ಸುಶೀಲಾ ಉಮಚಗಿ, ರೇಖಾ ಬೊರಟ್ಟಿ ಉಪಸ್ಥಿತರಿದ್ದರು. ಮುಖ್ಯೋಪಾಧ್ಯಾಯೆ ಎಸ್.ಜಿ. ಕಂಠಿ ಪ್ರಾಸ್ತಾವಿಕವಾಗಿ ಮಾತನಾಡಿದರು, ಎಸ್.ಟಿ. ಅಂಕದ ಸ್ವಾಗತಿಸಿದರು. ಎಸ್.ಬಿ. ಪಾಟೀಲ ನಿರೂಪಿಸಿದರು. ಎನ್.ಕೆ. ಬಳಿಗೇರ ವಂದಿಸಿದರು.

ಬೆಟಗೇರಿ ನೀಲಕಂಠೇಶ್ವರ ಮಠದ ಶಿವಾನುಭವ ಕಾರ್ಯಕ್ರಮದಲ್ಲಿ ಕವಿತಾ ದಂಡಿನ

ಅಭ್ಯಾಸ ಬಲದಿಂದ ಕಾರ್ಯ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಭ್ಯಾಸ ಬಲದಿಂದ ಕಾರ್ಯಗಳಲ್ಲಿ ಕೌಶಲ್ಯ ಉಂಟಾಗುತ್ತದೆಯೇ ಹೊರತು ತಾನಾಗಿಯೇ ಅಲ್ಲ. ನಮ್ಮ ಪ್ರಯತ್ನ, ಪರಿಶ್ರಮ ಜೊತೆಗೂಡಿದಾಗ ಕಾರ್ಯ ಯಶಸ್ವಿಯಾಗಿ ಸಾಧನೆ ದೊರೆ-ಯುತ್ತದೆ ಎಂದು ಚಿಂತಕಿ ಕವಿತಾ ದಂಡಿನ ಹೇಳಿದರು.

ಅವರು ಕುರುಹಿನಶಟ್ಟಿ ಸಮಾಜ ಬೆಟಗೇರಿ-ಗದಗ ವರಿಷ್ಠ ಮಂಡಳಿ ಹಾಗೂ ಕುರುಹಿನಶೆಟ್ಟಿ ಸಮಾಜದ ನೇಕಾರ ಅಭಿವೃದ್ಧಿ ಸಂಘದ ಆಶ್ರಯದಲ್ಲಿ ಬೆಟಗೇರಿ ನೀಲಕಂಠೇಶ್ವರ ಮಠದಲ್ಲಿ ಜರುಗಿದ 40ನೇ ಮಾಸಿಕ ಶಿವಾನುಭವ ಕಾರ್ಯಕ್ರಮದಲ್ಲಿ 'ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯಲ್ಲಿ ಪೋಷಕರ ಪಾತ್ರ' ವಿಷಯದ ಕುರಿತು ಮಾತನಾಡಿದರು.

ವಿದ್ಯಾರ್ಥಿಗಳು ಓದುವ ಹವ್ಯಾಸದಿಂದ ಜ್ಞಾನದ ವಿಕಾಸವನ್ನು ಹೊಂದುವರು. ಮಕ್ಕಳಲ್ಲಿ ಓದುವ ಹವ್ಯಾಸವನ್ನು ಮನೆಯಲ್ಲಿಯೂ ರೂಢಿಸಬೇಕು. ಟಿ.ವ್ಹಿ ಹಾಗೂ ಮೊಬೈಲ್ ಹಾವಳಿಗಳಿಂದ ಪಾಲಕರು ಮಗುವನ್ನು ದೂರವಿಟ್ಟು ಅವರನ್ನು ಉತ್ತಮ ಹಾಗೂ ಸಂಸ್ಕಾರಯುತ ನಾಗರಿಕರನ್ನಾಗಿ ರೂಪಿಸುವಲ್ಲಿ ಶ್ರಮಿಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಆರ್.ಬಿ. ಕೆಂಚಗುಂಡಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯಲ್ಲಿ ಪಾಲಕರು ಪ್ರಮುಖರು. ಮನೆಯಲ್ಲಿ ಮಕ್ಕಳಿಗೆ ಮೌಲ್ಯಗಳನ್ನು ಬಿತ್ತುವಲ್ಲಿ ನಾವು ಶ್ರಮಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ನೂರಂದಪ್ಪ ರೊಡ್ಡನವರ ಮಾತನಾಡಿ, ಮಕ್ಕಳನ್ನು ಭವಿಷ್ಯತ್ತಿಗೆ ಉತ್ತಮ ನಾಗರಿಕರನ್ನಾಗಿ ಮಾಡುವ ದೊಡ್ಡ ಜವಾಬ್ದಾರಿ ಪಾಲಕರ ಮೇಲಿದೆ. ನಾವೆಲ್ಲರೂ ಪ್ರೋತ್ಸಾಹ ನೀಡಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ದೊಡ್ಡಾಟದ ಹಿರಿಯ ಕಲಾವಿದರಾದ ವೆಂಕಣ್ಣ ಕಾಮಾರ್ತಿ, ರಾಮಣ್ಣ ಶೆಡ್ಡಿ ಹಾಗೂ ಚಾಟರ್ಡ್ ಅಕೌಂಟಂಟ್ ಈರಣ್ಣ ಸೂಡಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ವೇದಿಕೆಯ ಮೇಲೆ ನಗರಸಭಾ ಸದಸ್ಯೆ ಲಕ್ಷ್ಮೀ ಕಾಕಿ, ಗಣ್ಯರಾದ ಮಲ್ಲಿಕಾರ್ಜುನ ಐಲಿ, ನಿಂಗಪ್ಪ ಚೇಗೂರ, ದೇವೆಂದ್ರಪ್ಪ ಗೋಟೂರ, ಕುರುಹಿನಶೆಟ್ಟಿ ಮಹಿಳಾ ಮಂಡಳದ ಅಧ್ಯಕ್ಷೆ ಶಶಿಕಲಾ ಶ್ಯಾವಿ, ಶರಣಪ್ಪ ಗದ್ದಿಕೇರಿ ಉಪಸ್ಥಿತರಿದ್ದರು.

ತನುಶ್ರೀ ಆನಂದ ಹಾಗೂ ಸನ್ನಿಧಿ ಐಲಿ ವಚನ ಪ್ರಾರ್ಥನೆಗೈದರು. ತಾರಾ ಐಲಿ ಸ್ವಾಗತಿಸಿದರು. ಸಂಗಮೇಶ ಚೇಗೂರ ನಿರೂಪಿಸಿದರು. ಶ್ರೀಕಾಂತ ಡಾಣಿ ಪರಿಚಯಿಸಿದರು. ಕೊನೆಗೆ ಪ್ರಕಾಶ ಐಲಿ ವಂದಿಸಿದರು.

ಕಾರ್ಯಕ್ರಮದಲ್ಲಿ ರಾಘವೇಂದ್ರ ಶ್ಯಾವಿ, ರಾಮು ಸರಲಾ, ಚಂದ್ರು ಆನಂದ, ಶ್ರೀನಿವಾಸ ತಟ್ಟಿ, ನಿರಂಜನ ಹಿಪ್ಪರಗಿ, ಹನುಮಂತ, ಈರಣ್ಣ ಡಾಣಿ, ವೀರೇಶ ಸಣ್ಣದನಿ, ರಾಜು ಶೇಡರ, ತಿಮ್ಮಣ್ಣ ಶ್ಯಾವಿ, ಮಲ್ಲಿಕಾರ್ಜುನ ಕುದರಿ, ನಾಗರಾಜ ಆಮ್ರದ, ಶಶಾಂಕ ಜುಟ್ಲಾ, ಸುಮಂತ ಕುಮಚಗಿ, ನಾಗರಾಜ ಮಾಂತಗೊಂಡ, ಬಸವರಾಜ ಕರಿ, ಶ್ರೀಕಾಂತ ದೇಸಾಯಿ, ಶ್ರೀದೇವಿ ಕುಮಚಗಿ, ಶೋಭಾ ಜುಟ್ಲಾ, ಪ್ರಿಯಾಂಕಾ ಚೇಗೂರ, ಅನುಶ್ರೀ ಬಿದರೂರ ಸೇರಿದಂತೆ ಕುರುಹಿನ ಶೆಟ್ಟಿ ಸಮಾಜದ ಪದಾಧಿಕಾರಿಗಳು, ಸರ್ವ ಸದಸ್ಯರು ಹಾಗೂ ಸಮಾಜ ಬಾಂಧವರು ಉಪಸ್ಥಿತರಿದ್ದರು.

> ದಿವ್ಯ ಸಾನ್ನಿಧ್ಯ ವಹಿಸಿದ್ದ ಪೂಜ್ಯ ನೀಲಕಂಠ ಪಟ್ಟದಾರ್ಯ ಮಹಾಸ್ವಾಮಿಗಳು ಮಾತನಾಡಿ, ಸಾಧನೆಯು ಎಲ್ಲರ ಸ್ವತ್ತು. ವಿದ್ಯಾರ್ಥಿ ದಿಸೆಯಲ್ಲಿಯೇ ಮಕ್ಕಳು ಇಷ್ಟಪಟ್ಟು ಓದಿ ಯಶಸ್ಸು ಸಾಧಿಸಬೇಕು. ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಪಾಲಕರು ಅವರಿಗೆ ಉತ್ತಮ ಮಾರ್ಗದರ್ಶನ ನೀಡಬೇಕು ಎಂದರು.

ಉತ್ತಮ ಫಲಿತಾಂಶದೊಂದಿಗೆ ಶಾಲೆಯ ಕೀರ್ತಿ ಹೆಚ್ಚಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಿದಾಯತ್ ಪೂರ್ವ ಪ್ರಾರ್ಥಮಿಕ ಹಾಗೂ ಜೆ.ಯು. ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ ಆಚರಿಸಲಾಯಿತು. ಮುಖ್ಯ ಅಥಿತಿಗಳಾದ ಅಜಾದ್ ಕೋ-ಆಪರೇಟಿವ್ ಬ್ಯಾಂಕಿನ ಅಧ್ಯಕ್ಷ ಅಲ್ ಹಾಜ್ ಸರ್ಫರಾಜ್ ಅಹಮ್ಮದ್ ಉಮಚಗಿ ಉದ್ಘಾಟಿಸಿದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಮಕ್ಕಳು ಯಾವಾಗಲೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಷ್ಟೇ ಅಲ್ಲದೆ, ವಿದ್ಯಾಭ್ಯಾಸದಲ್ಲಿಯೂ ಮುಂದಿದ್ದು,

ಉತ್ತಮ ಫಲಿತಾಂಶ ತಂದರೆ ಶಾಲೆಯ ಕೀರ್ತಿ ಹೆಚ್ಚುತ್ತದೆ. ಅದಕ್ಕಾಗಿ ವಿದ್ಯಾರ್ಥಿಗಳು ಹೆಚ್ಚೆಚ್ಚು ಓದಬೇಕು ಎಂದು ಕಿವಿ ಮಾತನ್ನು ಹೇಳಿದರು.

ಶಿಕ್ಷಣ ಇಲಾಖೆಯ ನಿವೃತ್ತ ಡಿಡಿಪಿಅಯ್ ಐ.ಬಿ. ಬೆನಕೊಪ್ಪ, ಇಲಕಲ್‌ನ ಅರೇಬಿಕ್ ಶಾಲೆಯ ಶಿಕ್ಷಕ ಲಾಲಹುಸೇನ್ ಕಂದಗಲ್, ನಿವೃತ್ತ ಶಿಕ್ಷಕ ಎಂ.ಎಸ್. ಚಿನ್ನೂರ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರಾದ ಹಾಜಿ ಜುನೇದ ಉಮಚಗಿ ವಹಿಸಿಕೊಂಡಿದ್ದರು. ಕೆ.ಅಯ್. ಶೇಖರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗಣ್ಯ ಉದ್ದಿಮೆದಾರರಾದ ವಿಜಯಕುಮಾರ ಗಡ್ಡಿ, ಅಶ್ಫಾಕ್ ಹೊಸಳ್ಳಿ ಇಂಜಿನಿಯರ್, ಹಾಜಿ ಇಕ್ಬಾಲ್ ಹಣಗಿ, ಅಬ್ದುಲ್ ಹಫಿಜ್ ಉಮಚಗಿ, ಶಾಲೆಯ ಪ್ರಧಾನ ಗುರುಮಾತೆ ಪರವಿನ ಗುದಗಿ ಹಾಗೂ ಶಾಲೆಯ ಎಲ್ಲ ಗುರುಮಾತೆಯರು ಉಪಸ್ಥಿರಿದ್ದರು.

ಇದೇ ಸಂದರ್ಭದಲ್ಲಿ ಪ್ರತಿಭಾ ಕಾರಂಜಿಯಲ್ಲಿ ವಿಜೇತರಾದ ಮಕ್ಕಳಿಗೆ ಹಾಗೂ ಶಾಲೆಯಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ಮಕ್ಕಳಿಗೆ ಬಹುಮಾನವನ್ನು ವಿತರಿಸಲಾಯಿತು.

ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಲು ಮನವಿ

ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ಪುಣ್ಯ ಸ್ಮರಣೋತ್ಸವದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

ಆಂತರಿಕ ಜೀವನ ಪರಿಶುದ್ಧವಾಗಬೇಕು

■ ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ

ಮನುಷ್ಯ ಜೀವನದಲ್ಲಿ ಒಂದು ನಿಶ್ಚಿತ ಗುರಿ ಮತ್ತು ಒಬ್ಬ ಶ್ರೇಷ್ಠ ಗುರುವಿನ ಮಾರ್ಗದರ್ಶನ ಬೇಕು. ಭೌತಿಕ ಜೀವನ ಶ್ರೀಮಂತಗೊಂಡರಷ್ಟೇ ಸಾಲದು, ಆಂತರಿಕ ಜೀವನ ಪರಿಶುದ್ಧಗೊಳಿಸಲು ಗುರುವಿನ ಅವಶ್ಯಕತೆ ಬಹಳಷ್ಟಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಬುಕ್ಕಾಂಬುಧಿ ಬೆಟ್ಟದಲ್ಲಿ ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳವರ ಲಿಂಗ ಬೆಳಗಿನ 89ನೇ ವರ್ಷದ ಪುಣ್ಯ ಸ್ಮರಣೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಹುಟ್ಟಿದ ವ್ಯಕ್ತಿಗೆ ಮರಣ ನಿಶ್ಚಿತ. ಹುಟ್ಟು-ಸಾವುಗಳ ಮಧ್ಯದ ಬದುಕು ಆದರ್ಶವಾಗಿರಬೇಕು. ಸಂಸ್ಕಾರ ಸದ್ವಿಚಾರಗಳ ಪರಿಪಾಲನೆಯಿಂದ ಬದುಕು ಉಜ್ವಲಗೊಳ್ಳಲು ಸಾಧ್ಯ. ಪೆಟ್ಟು ತಿಂದ ಕಲ್ಲು ಸುಂದರ ಮೂರ್ತಿಯಾಗುತ್ತದೆ. ಪೆಟ್ಟು ಕೊಟ್ಟ ಸುತ್ತಿಗೆ ಸುತ್ತಿಗೆಯಾಗಿಯೇ ಉಳಿಯುತ್ತದೆ. ನೋವು ಕೊಡುವವರು ಹಾಗೆಯೇ ಉಳಿಯುತ್ತಾರೆ. ನೋವನ್ನು ಉಂಡವರು ಜ್ಞಾನಿಗಳಾಗುತ್ತಾರೆ. ಶೀಲ, ಶೌರ್ಯ, ಚಟುವಟಿಕೆ, ಪಾಂಡಿತ್ಯ,

ಮಿತ್ರ ಸಂಗ್ರಹ ಕಳ್ಳರು ಕದಿಯಲಾರದ ಅಕ್ಷಯ ನಿಧಿಗಳು. ಇವುಗಳನ್ನು ಸಂಪಾದಿಸಲು ಸದಾ ಮನುಷ್ಯ ಶ್ರಮಿಸಬೇಕಾಗುತ್ತದೆ.

ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಪರಿವರ್ತನಾಶೀಲ ಸಮಾಜ ನಿರ್ಮಾಣಕ್ಕೆ ಮಾಡಿದ ತಪಸ್ಸು ಮತ್ತು ಕೊಟ್ಟ ಸಂದೇಶ ಯಾವಾಗಲೂ ಮರೆಯಲು ಸಾಧ್ಯವಿಲ್ಲ. ಅಂಗ ಅವಗುಣಗಳನ್ನು ದೂರ ಮಾಡಿ ಲಿಂಗ ಗುಣ ಬೆಳೆಸಿದ ಯುಗಪುರುಷರು ಲಿಂ. ಶ್ರೀ ಸಿದ್ಧಲಿಂಗ ಜಗದ್ಗುರುಗಳು. ಅವರು ಬುಕ್ಕಾಂಬುಧಿ ಬೆಟ್ಟಕ್ಕಾಗಮಿಸಿ 100 ವರುಷ ಪೂರ್ಣಗೊಂಡಿದೆ. ಮುಂದೆ ಶುಭಾಗಮನದ ಶತಮಾನೋತ್ಸವ ಸಮಾರಂಭವನ್ನು ಅವರು ತಪಗೈದ ಬುಕ್ಕಾಂಬುಧಿ ತಪೋಕ್ಷೇತ್ರದಲ್ಲಿ ಆಚರಿಸುವ ಸತ್ಯ ಸಂಕಲ್ಪ ಟ್ರಸ್ಟ್ ಹೊಂದಿದೆ. ಈ ಮಹತ್ಕಾರ್ಯಕ್ಕೆ ಸರ್ವರ ಸಹಕಾರ ಅಗತ್ಯವೆಂದರು.

ನೇತೃತ್ವ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಆಧುನಿಕ ಕಾಲದಲ್ಲಿ ಸಂಬಂಧಗಳು ಕಣ್ಮರೆಯಾಗುತ್ತಿವೆ. ಧಾರ್ಮಿಕ ಸಂಸ್ಕಾರದ ಪರಿಪಾಲನೆಯಿಂದ ಬದುಕು ಉತ್ಕೃಷ್ಟಗೊಳ್ಳಲು ಸಾಧ್ಯವಾಗುತ್ತದೆ. ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಬುಕ್ಕಾಂಬುಧಿ ಕ್ಷೇತ್ರದಲ್ಲಿ ತಪಸ್ಸು ಮಾಡಿ ನಮ್ಮೆಲ್ಲರಿಗೂ ಆದರ್ಶ ದಾರಿ ತೋರಿಸಿದ್ದಾರೆ ಎಂದರು.

ತರೀಕೆರೆ ಕ್ಷೇತ್ರದ ಶಾಸಕರಾದ ಜಿ.ಎಚ್. ಶ್ರೀನಿವಾಸ ಮಾತನಾಡಿ, ನಿರ್ಮಾಣಗೊಳ್ಳುತ್ತಿರುವ ಯಾತ್ರಿ ನಿವಾಸಕ್ಕೆ 5 ಲಕ್ಷ ರೂ. ಅನುದಾನ ಕೊಡುವುದಾಗಿ ಘೋಷಿಸಿದರು. ಶಿವಮೊಗ್ಗದ ದಿವ್ಯ ಪ್ರೇಮ 1 ಲಕ್ಷ ರೂ. ಮಹಾಲಿಂಗ ಶಾಸ್ತ್ರಿಗಳು 51 ಸಾವಿರ, ರಟ್ಟೀಹಳ್ಳಿ ಶ್ರೀಗಳು 25 ಸಾವಿರ ರೂ. ವಾಗ್ದಾನ ಮಾಡಿದರು. ಶಿವಮೊಗ್ಗ ಶಾಸಕ ಎಸ್.ಎನ್. ಚನ್ನಬಸಪ್ಪ ಹಾಗೂ ವಿಧಾನ ಪರಿಷತ್ ಸದಸ್ಯ ಡಾ. ಧನಂಜಯ ಸರ್ಜಿ ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಸಮ್ಮುಖ ವಹಿಸಿದ ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸುಖ ಬಯಸುವ ಮನುಷ್ಯ ಧರ್ಮ ಪಾಲನೆ ಮಾಡಲು ಹಿಂಜರಿಯುತ್ತಾನೆ. ದುಃಖ ಯಾರಿಗೂ ಬೇಕಾಗಿಲ್ಲ. ಸತ್ಯ ಶುದ್ಧ ಸೈದ್ಧಾಂತಿಕ ತಳಹದಿಯ ಮೇಲೆ ಮಾನವ ಜೀವನ ರೂಪಿತಗೊಳ್ಳಬೇಕು. ಆದರ್ಶ ಬದುಕಿಗಾಗಿ ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಶ್ರಮಿಸಿದರು ಎಂದರು.

ಈ ಪವಿತ್ರ ಸಮಾರಂಭದಲ್ಲಿ ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು, ಯಲಬುರ್ಗಾ ಹಾವಗಿ ಲಿಂಗೇಶ್ವರ ಶಿವಾಚಾರ್ಯರು, ಹುಣಸಘಟ್ಟದ ಗುರುಮೂರ್ತಿ ಶಿವಾಚಾರ್ಯರು, ತಾವರೆಕೆರೆ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯರು, ರಟ್ಟೀಹಳ್ಳಿ ಶಿವಲಿಂಗ ಶಿವಾಚಾರ್ಯರು, ಕಡೆನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯರು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು ಪಾಲ್ಗೊಂಡಿದ್ದರು. ಮುಖ್ಯ ಅತಿಥಿಗಳಾಗಿ ಬುಕ್ಕಾಂಬುಧಿ ಕೆ.ಆರ್. ಚಂದ್ರಶೇಖರಪ್ಪ, ಶಿವಮೊಗ್ಗದ ರತ್ನಮ್ಮ ಮಂಜುನಾಥ ಉಪಸ್ಥಿತರಿದ್ದು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ಸಮಾರಂಭ ಉದ್ಘಾಟಿಸಿದ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಮಾತನಾಡಿ, ಭವ ಬಂಧನದಿಂದ ಮುಕ್ತಗೊಳಿಸುವ ಶಕ್ತಿ ಗುರುವಿಗೆ ಇದೆ. ಮೌನ ಮನಸ್ಸು ಶುದ್ಧಿ ಮಾಡುತ್ತದೆ. ಧ್ಯಾನ ಬುದ್ಧಿ ಶುದ್ಧಿ ಮಾಡುತ್ತದೆ. ಪ್ರಾರ್ಥನೆ ಆತ್ಮ ಶುದ್ಧಿ ಮಾಡುತ್ತದೆ. ಈ ಮಹತ್ತರ ಗುರಿಯಿಟ್ಟು ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಲೋಕ ಕಲ್ಯಾಣಕ್ಕಾಗಿ ತಪಸ್ಸು ಮಾಡಿದ್ದನ್ನು ನಾವು ಯಾರೂ ಮರೆಯಬಾರದೆಂದರು.

ಹಣ್ಣೆ ಮರುಳಸಿದ್ಧ ಪಂಡಿತಾರಾಧ್ಯ ಶಿವಾಚಾರ್ಯರು ಪ್ರಾಸ್ತಾವಿಕ ನುಡಿದರು. ಹೆಚ್.ಪಿ. ಮಲ್ಲಿಕಾರ್ಜುನ ಸ್ವಾಗತಿಸಿದರು. ಬೀರೂರು ರುದ್ರಮುನಿ ಶಿವಾಚಾರ್ಯರು ನಿರೂಪಿಸಿದರು. ಚನ್ನಗಿರಿ ಡಾ.ಕೇದಾರ ಶಿವಶಾಂತವೀರ ಶಿವಾಚಾರ್ಯರು ಪ್ರಾರ್ಥನೆ ಹಾಡಿದರು. ಶ್ರೀ ಮದುಜ್ಜಯಿನಿ ಜಗದ್ಗುರು ಸಿದ್ಧಲಿಂಗ ಶಿವಾಚಾರ್ಯ ಟ್ರಸ್ಟಿನ ಉಪಾಧ್ಯಕ್ಷ ಎಸ್.ಎಮ್. ವೀರಭದ್ರಪ್ಪ ವಂದನಾರ್ಪಣೆ ಮಾಡಿದರು. ಕಾರ್ಯದರ್ಶಿ ಹೆಚ್.ಪಿ. ಸುರೇಶ ಸೇರಿದಂತೆ ಎಲ್ಲ ಸದಸ್ಯರು ಪಾಲ್ಗೊಂಡಿದ್ದರು.

ಆಕ್ಷೇಪಣೆ ಸಲ್ಲಿಸಲು ಜ.23ರವರೆಗೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗಿತ್ತು.

ಧಾರವಾಡ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ 12 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ ಅಧಿಸೂಚನೆಯಲ್ಲಿ ನಿಗದಿಯಾಗಿರುವ ಹುದ್ದೆಗಳ ಎದುರಾಗಿ 1:1 ಅನುಪಾತದಲ್ಲಿ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಹಾಗೂ ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಧಾರವಾಡ ಜಿಲ್ಲಾ ವೆಬ್ ಸೈಟ್ ಗಣಣಠಿ://ಜುಚಿಡಿತಿಚಿಜ.ಟಿಟಿಛಿಟಿ ನಲ್ಲಿ ಜನವರಿ 16, 2025ರಂದು ಪ್ರಕಟಿಸಲಾಗಿದೆ.

ತಾತ್ಕಾಲಿಕ 1:1 ಆಯ್ಕೆ ಪಟ್ಟಿ ಹಾಗೂ ಹೆಚ್ಚುವರಿ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಲಿಖಿತವಾಗಿ ದಾಖಲೆಗಳೊಂದಿಗೆ ಜನವರಿ 23, 2025ರೊಳಗಾಗಿ ಜಿಲ್ಲಾಧಿಕಾರಿಗಳ ಕಛೇರಿಗೆ ಸಲ್ಲಿಸಬಹುದಾಗಿದೆ ಎಂದು ಗ್ರಾಮ ಆಡಳಿತ ಅಧಿಕಾರಿಗಳ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವೀರಪ್ಪಜ್ಜನವರ ಪುಣ್ಯಾರಾಧನೆ ಶತಮಾನೋತ್ಸವದ ಭಿತ್ತಿಪತ್ರ, ಲೋಗೋ ಬಿಡುಗಡೆ

ಪುಣ್ಯಾರಾಧನೆಯಲ್ಲಿ ಶ್ರದ್ಧಾಭಕ್ತಿಯಿಂದ ಪಾಲ್ಗೊಳ್ಳೋಣ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವವು ಜನವರಿ 30ರಿಂದ ಪ್ರಾರಂಭವಾಗಲಿದ್ದು, 7ರಂದು ಮಹಾರಥೋತ್ಸವ ಜರುಗಲಿದೆ. ಈ ನಿಮಿತ್ತ ಶ್ರೀಮಠದಲ್ಲಿ ಪುಣ್ಯಾರಾಧನೆ ಶತಮಾನೋತ್ಸವದ ಭಿತ್ತಿಪತ್ರ ಮತ್ತು ಲೋಗೋ ಬಿಡುಗಡೆ ಮಾಡಲಾಯಿತು.

ಭಿತ್ತಿಪತ್ರ ಮತ್ತು ಲೋಗೋ ಬಿಡುಗಡೆ ಮಾಡಿ ಮಾತನಾಡಿದ ಪ.ಪೂ. ಶ್ರೀ ಡಾ. ವಿಶ್ವನಾಥ ಮಹಾಸ್ವಾಮಿಗಳು, ವೀರಪ್ಪಜ್ಜನರು ಹಠಯೋಗಿಗಳು ಲಿಂಗೈಕ್ಯರಾಗಿ 2025ಕ್ಕೆ 100 ವರ್ಷಗಳಾದವು. ಆದ್ದರಿಂದ ಟ್ರಸ್ಟ್ ಕಮಿಟಿಯವರು ಈ ಸಾರೆಯ ಜಾತ್ರಾ ಮಹೋತ್ಸವವನ್ನು ಪುಣ್ಯಾರಾಧನೆಯ ಶತಮಾನೋತ್ಸವವೆಂದು ಆಚರಿಸುತ್ತಿದ್ದಾರೆ. ಇದರಲ್ಲಿ ನಾವೆಲ್ಲರೂ ಶ್ರದ್ಧಾಭಕ್ತಿಗಳಿಂದ ಪಾಲ್ಗೊಳ್ಳೋಣ ಎಂದು ಹೇಳಿದರು.

ಯಾವುದೇ ಕಾರ್ಯಕ್ರಮ, ಜಾತ್ರೆ, ಸಮಾರಂಭ ಯಶಸ್ವಿಯಾಗಬೇಕಿದ್ದರೆ ಅದಕ್ಕೆ

ಮಾಧ್ಯಮದವರ ಸಹಾಯ ಬೇಕೇಬೇಕು. ಅದಕ್ಕಾಗಿ ಈ ನಾಡಿನ ಎಲ್ಲ ಮಾಧ್ಯಮದವರು ಈ ಪುಣ್ಯಾರಾಧನೆಯ ಶತಮಾನೋತ್ಸವದ ಸುದ್ದಿಯನ್ನು ನಾಡಿನಾದ್ಯಂತ ಹೆಚ್ಚಿನ ಪ್ರಮಾಣದಲ್ಲಿ ಬಿತ್ತರಿಸಬೇಕೆಂದು ಶ್ರೀಗಳು ಹೇಳಿದರು.

ಫೆಬ್ರುವರಿ 5ರಂದು ಪುಣ್ಯಾರಾಧನೆಯ ಶತಮಾನೋತ್ಸವದ ವಿದ್ಯುಕ್ತ ಉದ್ಘಾಟನೆ ಜರುಗಲಿದ್ದು, ನಾಡಿನ ಹರ-ಗುರು-ಚರ ಮೂರ್ತಿಗಳು, ರಾಜಕೀಯ ಧುರೀಣರು, ಗಣ್ಯರು, ವಿದ್ವಾಂಸರು ಈ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಪುಣ್ಯ ಕಾರ್ಯದಲ್ಲಿ ನಾವೆಲ್ಲರೂ ಪಾಲ್ಗೊಂಡು ಪುನೀತರಾಗೋಣ. ಆ. 30ರ ಮಧ್ಯಾಹ್ನ 12ಕ್ಕೆ ಪಟ್ಟಣದ ಕೇಂದ್ರ ಭಾಗದಲ್ಲಿರುವ ಶ್ರೀ ಗಜಾನನ ದೇವಸ್ಥಾನದಿಂದ ವೀರಪ್ಪಜ್ಜನವರ ಭವ್ಯ ಭಾವಚಿತ್ರದ ಮೆರವಣಿಗೆಯು ಪಟ್ಟಣದ ಪ್ರಮುಖ ಮಾರ್ಗಗದಲ್ಲಿ ನಡೆಯಲಿದೆ. ಇದರಲ್ಲಿ ಭಕ್ತರೆಲ್ಲರೂ ಪಾಲ್ಗೊಳ್ಳಬೇಕೆಂದು ಡಾ. ಗೌರಿ ವಿನಂತಿಸಿದರು.

ಸಭೆಯ ಅಧ್ಯಕ್ಷತೆಯನ್ನು ಟ್ರಸ್ಟ್ ಕಮಿಟಿಯ ಅಧ್ಯಕ್ಷ ಡಾ. ಎಂ.ಸಿ. ಚಪ್ಪನ್ನಮಠ ವಹಿಸಿದ್ದರು. ಸಭೆಯನ್ನುದ್ದೇಶಿಸಿ ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ, ಮೈಲಾರಪ್ಪ ಚಳ್ಳಮರದ ಟ್ರಸ್ಟ್ ಕಮಿಟಿಯ ಸದಸ್ಯ ಡಾ. ಎಲ್. ಎಸ್. ಗೌರಿ ಮಾತನಾಡಿ, ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವದ ಕಾರ್ಯಕ್ರಮಗಳ ವಿವರಣೆ ನೀಡಿದರು. ಜ. 30ರಿಂದ ವೀರಪ್ಪಜ್ಜನರ ಜೀವನ ದರ್ಶನದ ಪ್ರವಚನ ಪ್ರಾರಂಭವಾಗಲಿದ್ದು, ಪ್ರವಚನ ನುಡಿಯನ್ನು ರೋಣ ಬೂದೀಶ್ವರ ಮಠದ ಪ.ಪೂ. ಡಾ. ವಿಶ್ವನಾಥ ಮಹಾಸ್ವಾಮಿಗಳವರು ನುಡಿಯಲಿದ್ದಾರೆ. ಪ್ರತಿ ದಿನ ಒಬ್ಬರು ಅಥವಾ ಇಬ್ಬರು ಮಹಾಸ್ವಾಮೀಜಿಗಳು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ ಎಂದರು.

ಮಾತನಾಡಿದರು. ಸಭೆಯಲ್ಲಿ ಕುಮಾರಸ್ವಾಮಿ ಕೋರಧಾನ್ಯಮಠ, ವಿಜಯಕುಮಾರ ಅಂಗಡಿ, ಶೇಕಪ್ಪ ಜುಟ್ಲ, ಮಲ್ಲಿಕಾರ್ಜುನಗೌಡ ಮಲ್ಲನಗೌಡ್ರ, ಕೃಷ್ಣಪ್ಪ ಜುಟ್ಲ, ಅಂದಪ್ಪ ಧರ್ಮಾಯತ, ಮಾಂತಯ್ಯ ಗುರುವಡೆಯರ, ಶಂಕ್ರಯ್ಯ ಮಠದ, ಅಂದಾನಗೌಡ ಬೂದಿಹಾಳ, ಶಿವಾನಂದ ಸಂಗನಾಳ, ಬಸವರಾಜ ಧರ್ಮಾಯತ, ಡಾ. ಮಲ್ಲನಗೌಡ್ರ ಮುಂತಾದವರಿದ್ದರು.

ತೋಂಟದ ಸಿದ್ಧೇಶ್ವರ ಪ.ಪೂ ಮಹಾವಿದ್ಯಾಲಯದ ವಾರ್ಷಿಕೋತ್ಸವ ಸಮಾರಂಭದಲ್ಲಿ ಎಸ್‌ಪಿ ಬಿ.ಎಸ್ ನೇಮಗೌಡ

ಯುವಜನರ ಪ್ರಗತಿಯೇ ದೇಶದ ಉನ್ನತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಅತಿಹೆಚ್ಚು ಯುವಜನರನ್ನು ಹೊಂದಿದ ದೇಶವಾಗಿದ್ದು, ದೇಶದ ಅಭಿವೃದ್ಧಿಯ ದೃಷ್ಟಿಯಿಂದ ಇದು ಲಾಭದಾಯವಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಯುವಜನಾಂಗ ಅನೇಕ ದುಶ್ಚಟಗಳತ್ತ ವಾಲುತ್ತಿದೆ. ಇದು ದೇಶಕ್ಕೆ ಮಾರಕವಾಗಿದ್ದು, ಯುವಜನರ ಪ್ರಗತಿಯೇ ದೇಶದ ಉನ್ನತಿ ಎಂದು ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ನುಡಿದರು.

ಅವರು ನಗರದ ತೋಂಟದಾರ್ಯ ಕಲ್ಯಾಣಕೇಂದ್ರದಲ್ಲಿ ಜರುಗಿದ ತೋಂಟದ ಸಿದ್ಧೇಶ್ವರ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ಪ.ಪೂ ಮಹಾವಿದ್ಯಾಲಯದ ವಾರ್ಷಿಕೋತ್ಸವ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ತೋಂಟದಾರ್ಯ ಮಠದ ಶೈಕ್ಷಣಿಕ ಸಂಸ್ಥೆಗಳು ಗುಣಮಟ್ಟದ ಶಿಕ್ಷಣಕ್ಕೆ ಹೆಸರುವಾಸಿಯಾಗಿವೆ. ವಿದ್ಯಾರ್ಥಿಗಳು ಸರ್ವಾಂಗೀಣ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಲು ಆದ್ಯತೆ ನೀಡಬೇಕಿದೆ. ಬಡವ, ಶ್ರೀಮಂತ, ಕನ್ನಡ-ಆಂಗ್ಲ ಮಾಧ್ಯಮ ಹೀಗೆ ಯಾವುದೇ ಬಗೆಯ ಕೀಳರಿಮೆಗಳಿಗೆ ಆಸ್ಪದ ನೀಡದೇ ನಮ್ಮಲ್ಲಿ ಅಡಗಿರುವ ಸಾಮರ್ಥ್ಯವನ್ನು ಹೊರಹಾಕುವತ್ತ ಚಿಂತನೆ ನಡೆಸಬೇಕು. ಶೈಕ್ಷಣಿಕ,

ಸಾಹಿತ್ಯಿಕ-ಸಾಮಾಜಿಕವಾಗಿ ನಾಡಿಗೆ ಗದಗ ಜಿಲ್ಲೆಯ ಕೊಡುಗೆ ಅಪಾರವಾಗಿದ್ದು, ಅನೇಕ ಮಹಾತ್ಮರು ಗದುಗಿನ ಕೀರ್ತಿಪತಾಕೆಯನ್ನು ರಾಜ್ಯ-ರಾಷ್ಟ್ರ ಮಟ್ಟದಲ್ಲಿ ಪಸರಿಸಿದ್ದಾರೆ. ಕೃಷಿ, ಕೈಗಾರಿಕೆ ಹೀಗೆ ಯಾವುದೇ ಕ್ಷೇತ್ರ ಇದ್ದರೂ ಕಾಯಕಕ್ಕೆ ಹಿಂಜರಿಯಬಾರದು ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಪ್ರೊ. ಎಸ್.ಎಸ್ .ಪಟ್ಟಣಶೆಟ್ಟರ ಮಾತನಾಡಿ, ತೋಂಟದ ಸಿದ್ಧೇಶ್ವರ ಪ.ಪೂ ಕಾಲೇಜು ಸ್ಥಾಪನೆಯಾದ ಅಲ್ಪಾವಧಿಯಲ್ಲೇ ಅತ್ಯುತ್ತಮ ಫಲಿತಾಂಶ ನೀಡಿ ಈ ಪರಿಸರದಲ್ಲಿ ತನ್ನದೇ ಹೆಸರು ಸ್ಥಾಪಿಸಿದೆ. ವಿದ್ಯಾರ್ಥಿಗಳು ಹದ್ದಿನಂತೆ ತೀಕ್ಷ್ಣ ಗುರಿಯನ್ನು ಹೊಂದಿ ಅದನ್ನು ತಲುಪಲು ಪರಿಪೂರ್ಣವಾಗಿ

ಸಾನ್ನಿಧ್ಯ ವಹಿಸಿದ್ದ ಭೈರನಟ್ಟಿ-ಶಿರೋಳ ಮಠದ ಶಾಂತಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ತೋಂಟದ ಸಿದ್ಧೇಶ್ವರ ಮಹಾವಿದ್ಯಾಲಯ ಬೆಳೆದುಬಂದ ಹಾದಿಯನ್ನು ಹತ್ತಿರದಿಂದ ಗಮನಿಸಿದ್ದು, ವಿದ್ಯಾರ್ಥಿಗಳ ವಯಕ್ತಿಕ ಕಾಳಜಿಗೆ ಇಲ್ಲಿ ಆದ್ಯತೆ ನೀಡಲಾಗುತ್ತದೆ. ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳು ಮಕ್ಕಳಿಗೆ ಅವಶ್ಯವಿದ್ದು, ಆದರ್ಶ ವ್ಯಕ್ತಿಗಳ ಹಾದಿಯಲ್ಲಿ ನಡೆಯುವ ಮೂಲಕ ನೀವೂ ಅವರಂತೆ ಸಾಧಕರಾಗಬೇಕು ಎಂದರು.

ತೊಡಗಿಸಿಕೊಳ್ಳಬೇಕು. ಪಿ.ಯು.ಸಿಯಲ್ಲಿ ಶೇ.95ಕ್ಕಿಂತ ಹೆಚ್ಚು ಅಂಕ ಗಳಿಸಿದರೆ ಇಂಜಿನಿಯರಿಂಗ್ ಹಾಗೂ ಪದವಿ ಕೋರ್ಸುಗಳಿಗೆ ಉಚಿತ ಪ್ರವೇಶ ನೀಡುವುದಾಗಿ ತಿಳಿಸಿದ ಅವರು, ಎಲ್ಲಾ ಸಂಪತ್ತಿಗಿಂತ ವಿದ್ಯಾಸಂಪತ್ತು ಶ್ರೇಷ್ಠ. ಹಾಗಾಗಿ ವಿದ್ಯೆಯ ಸಂಪಾದನೆಯಲ್ಲಿ ಮಕ್ಕಳು ನಿರತರಾಗಲು ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ. ಎಸ್.ಬಿ. ಶೆಟ್ಟರ್ ಮಾತನಾಡಿ, ಪಿಯುಸಿ ಹಂತ ವಿದ್ಯಾರ್ಥಿಗಳ ಭವಿಷ್ಯದಲ್ಲಿ ಪ್ರಮುಖ ಘಟ್ಟವಾಗಿದ್ದು, ಶ್ರದ್ಧೆ-ಪ್ರಾಮಾಣಿಕತೆಯಿಂದ ಕಲಿತರೆ ಗುರಿ ಮುಟ್ಟುವುದು ಸುಲಭವಾಗುತ್ತದೆ. ದೇಶವು ರಚನಾತ್ಮಕವಾಗಿ ಬೆಳೆಯಬೇಕಾದರೆ ವಿದ್ಯಾರ್ಥಿಗಳ ಕೊಡುಗೆ ಮಹತ್ವದ್ದಾಗಿದೆ ಎಂದರು.

ಅತಿಥಿಗಳಾಗಿ ಭಾಗವಹಿಸಿದ್ದ ಲೋಯೊಲಾ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಸಿಸ್ಟರ್ ರೇನಿಟಾ ಪೀಂಟೂ ಮಾತನಾಡಿ, ವಿದ್ಯಾರ್ಥಿಗಳಿಗೆ ಶಿಸ್ತು-ಸಂಯಮ ಹಾಗೂ ಸಮಯಪ್ರಜ್ಞೆಯ ಪ್ರಾಮುಖ್ಯತೆ ಕುರಿತು ತಿಳಿಸಿದರು.

ದೈಹಿಕ ಶಿಕ್ಷಣ